ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

KA/SK/DVG-049/2026-2028

Kannada Daily

Davangere **Volume :**1 **Issue:** 142 Tuesday **17-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 142 ಮಂಗಳವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಅಂತರ್ಜಲ ಕುಸಿತದ ಆತಂಕದ ನಡುವೆ ರೇಷ್ಮೆ ಕೃಷಿಗೆ ಬೆಲೆ ಸ್ಥಿರತೆಯ ಬಲ!

ಬೆಲೆ ಸ್ಥಿರತೆಯಿಂದ ಹೊಸ ಬೆಳೆಗಾರರ ಒಲವು; ನೀರಿನ ಕೊರತೆಯಿಂದ ಹಳೇ ತೋಟಗಳ ಉಳಿವಿಗೂ ಸವಾಲು

“ಮುಂಜಾನೆಯ ಮೆರಗು”

ಜಗಳೂರು ನ, 16– ಕೃಷಿ ಕ್ಷೇತ್ರದಲ್ಲಿ ನಿರಂತರ ಆದಾಯದ ನಿರೀ–ಕ್ಷೆ ಮೂಡಿಸುವ ಉಪಕಸುಬುಗಳಲ್ಲಿ ರೇಷ್ಮೆ ಕೃಷಿಯೂ ಪ್ರಮುಖವಾಗಿದೆ. ಕಡಿಮೆ ಭೂಮಿಯಲ್ಲಿಯೂ ವೈಜ್ಞಾನಿಕ ಪದ್ಧತಿಯಲ್ಲಿ ರೇಷ್ಮೆ ಕೃಷಿ ಕೈಗೊಂಡು ಉತ್ತಮ ಆದಾಯ ಗಳಿಸುವ ಅವಕಾಶವಿದೆ. ಆದರೆ ಜಗಳೂರು ತಾಲ್ಲೂಕಿನಲ್ಲಿ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿರುವ ಅಂತರ್ಜಲ ಕೊರತೆ ರೇಷ್ಮೆ ಬೆಳೆಗಾರರ ಭವಿಷ್ಯಕ್ಕೆ ಆತಂಕ ತಂದೊಡ್ಡಿದೆ. ಒಂದೆಡೆ ರೇಷ್ಮೆ ಗೂಡಿನ ಬೆಲೆಯಲ್ಲಿ ಸ್ಥಿರತೆ ಕಂಡುಬಂದು ರೈತರಲ್ಲಿ ಹೊಸ ಉತ್ಸಾಹ ಮೂಡಿದ್ದರೆ, ಮತ್ತೊಂದೆಡೆ ನೀರಿನ ಅಭಾವದಿಂದ ಹೊಸದಾಗಿ ರೇಷ್ಮೆ ತೋಟಗಳನ್ನು ನಿರ್ಮಿಸಿಕೊಳ್ಳಲು ರೈತರು ಹಿಂದೇಟು ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ.

ತಾಲ್ಲೂಕಿನಲ್ಲಿ ಸುಮಾರು 404 ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಕೃಷಿ ನಡೆಯುತ್ತಿದ್ದು, 491 ಮಂದಿ ರೇಷ್ಮೆ ಬೆಳೆಗಾರರು ಕೃಷಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಅದರಲ್ಲೂ ಕಸಬ ಹೋಬಳಿಯಲ್ಲಿ ರೇಷ್ಮೆ ಕೃಷಿ ಹೆಚ್ಚಿನ ಪ್ರಮಾಣದಲ್ಲಿದೆ. ಆದರೆ ಬಿಳಿಚೋಡು ಮತ್ತು ಸೊಕ್ಕೆ ಹೋಬಳಿಗಳಲ್ಲಿ ಅಂತರ್ಜಲ ಮಟ್ಟ ಗಣನೀಯವಾಗಿ ಕುಸಿಯುತ್ತಿರುವುದರಿಂದ ಈಗಾಗಲೇ ಬೆಳೆಸಿರುವ ರೇಷ್ಮೆ ತೋಟಗಳನ್ನು ಉಳಿಸಿಕೊಳ್ಳುವುದೇ ರೈತರಿಗೆ ದೊಡ್ಡ ಸವಾಲಾಗಿದೆ.



ಬೆಲೆ ಸ್ಥಿರತೆ ರೈತರಲ್ಲಿ ಹೊಸ ಭರವಸೆ

ರೇಷ್ಮೆ ಕೃಷಿಯಲ್ಲಿ ರೈತರ ಆದಾಯವನ್ನು ನಿರ್ಧರಿಸುವ ಪ್ರಮುಖ ಅಂಶವೆಂದರೆ ಮಾರುಕಟ್ಟೆಯಲ್ಲಿ ಗೂಡಿಗೆ ದೊರೆಯುವ ಬೆಲೆ. ಕಳೆದ ಆರು ವರ್ಷಗಳಿಂದ ಪ್ರತಿ ಕೆ.ಜಿ. ರೇಷ್ಮೆ ಗೂಡಿಗೆ ಸರಾಸರಿ 800 ರೂ. ಆಸುಪಾಸಿನಲ್ಲಿ ಬೆಲೆ ದೊರೆಯುತ್ತಿರುವುದು ಬೆಳೆಗಾರರಿಗೆ ತುಸು ನೆಮ್ಮದಿ ತಂದಿದೆ. ವಿಶೇಷವಾಗಿ ಕಳೆದ ಒಂದು ವರ್ಷದಿಂದ ಬೆಲೆಯಲ್ಲಿ ಸ್ಥಿರತೆ ಕಂಡುಬಂದಿರುವುದು ರೈತರಲ್ಲಿ ಕೃಷಿಯ ಬಗ್ಗೆ ವಿಶ್ವಾಸ ಹೆಚ್ಚಿಸಿದೆ.

ಇದರ ಪರಿಣಾಮವಾಗಿ ಈ ವರ್ಷ ಸುಮಾರು 70ರಿಂದ 75 ಮಂದಿ ಹೊಸ ರೈತರು ರೇಷ್ಮೆ ಕೃಷಿಯತ್ತ ಆಸಕ್ತಿ ತೋರಿಸಿದ್ದಾರೆ. ಬೆಲೆ ಸ್ಥಿರತೆಯು ಹೊಸ ಬೆಳೆಗಾರರನ್ನು ಆಕರ್ಷಿಸುತ್ತಿರುವುದು ರೇಷ್ಮೆ ಕೃಷಿಯ ಬೆಳವಣಿಗೆಯ ದೃಷ್ಟಿಯಿಂದ ಆಶಾದಾಯಕ ಬೆಳವಣಿಗೆಯಾಗಿದೆ.

ಆದರೆ ನೀರಿನ ಸಮಸ್ಯೆ ಮಾತ್ರ ಈ ಬೆಳವಣಿಗೆಗೆ ಅಡ್ಡಿಯಾಗುತ್ತಿದೆ. ರೇಷ್ಮೆ ಹುಳುಗಳ ಸಾಕಾಣಿಕೆಗೆ ಅಗತ್ಯವಿರುವ ಹಿಪ್ಪುನೇರಳೆ ಸೊಪ್ಪನ್ನು ನಿರಂತರವಾಗಿ ಉತ್ಪಾದಿಸಬೇಕಾಗುತ್ತದೆ. ಇದಕ್ಕೆ ಸಮರ್ಪಕ ನೀರಿನ ಅಗತ್ಯವಿದೆ. ಮಳೆ ಕೈಕೊಟ್ಟಾಗ ಹಾಗೂ ಅಂತರ್ಜಲ ಮಟ್ಟ ಕುಸಿದಾಗ ಹಿಪ್ಪುನೇರಳೆ ತೋಟಗಳು ಒಣಗುವ ಸಾಧ್ಯತೆ ಹೆಚ್ಚಾಗುತ್ತದೆ. ಇದರಿಂದ ರೇಷ್ಮೆ ಹುಳುಗಳ ಸಾಕಾಣಿಕೆ ಮತ್ತು ಗೂಡಿನ ಉತ್ಪಾದನೆಯ ಮೇಲೂ ಪರಿಣಾಮ ಬೀರುತ್ತದೆ.

ರೈತರಿಗೆ ಇಲಾಖೆಯಿಂದ ಹಲವು ಸೌಲಭ್ಯಗಳು

ರೇಷ್ಮೆ ಕೃಷಿಯನ್ನು ಉತ್ತೇಜಿಸುವ ಉದ್ದೇಶದಿಂದ ರೇಷ್ಮೆ ಇಲಾಖೆ ವಿವಿಧ ಯೋಜನೆಗಳಡಿ ರೈತರಿಗೆ ಸಹಾಯಧನ ಸೌಲಭ್ಯಗಳನ್ನು ಒದಗಿಸುತ್ತಿದೆ. ಹೊಸದಾಗಿ ಒಂದು ಎಕರೆ ಪ್ರದೇಶದಲ್ಲಿ ರೇಷ್ಮೆ ನಾಟಿ ಮಾಡಿಕೊಳ್ಳುವ ರೈತರಿಗೆ ವಿಬಿಜಿ ರಾಮ್ ಜಿ ಯೋಜನೆಯಡಿ ಶೇ.50ರಷ್ಟು ಸಹಾಯಧನ ನೀಡಲಾಗುತ್ತಿದೆ.



ಅದೇ ರೀತಿ ಒಂದು ಎಕರೆ ಪ್ರದೇಶದಲ್ಲಿ ಹನಿ ನೀರಾವರಿ ಘಟಕ ಅಳವಡಿಸಿಕೊಳ್ಳುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಸೇರಿದಂತೆ ಇತರೆ ವರ್ಗದ ರೈತರಿಗೆ ಶೇ.90ರಷ್ಟು ಸಹಾಯಧನ ನೀಡುವ ಅವಕಾಶವಿದೆ.

ರೇಷ್ಮೆ ಹುಳುಗಳ ಸಾಕಾಣಿಕೆಗೆ ಅಗತ್ಯವಿರುವ ಮನೆ ನಿರ್ಮಿಸಿಕೊಳ್ಳುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90ರಷ್ಟು ಹಾಗೂ ಇತ–ರೆ ವರ್ಗದ ರೈತರಿಗೆ ಶೇ.75ರಷ್ಟು ಸಹಾಯಧನ ಲಭ್ಯವಿದೆ.



ಇದರೊಂದಿಗೆ ರೇಷ್ಮೆ ಹುಳು ಸಾಕಾಣಿಕೆಗೆ ಬೇಕಾಗುವ ವಿವಿಧ ಸಲಕರಣೆಗಳ ಖರೀದಿಗೂ ಸಹಾಯಧನ ನೀಡಲಾಗುತ್ತಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90ರಷ್ಟು ಹಾಗೂ ಇತರ ವರ್ಗದ ರೈತರಿಗೆ ಶೇ.75ರಷ್ಟು ಸಹಾಯಧನ ಒದಗಿಸಲಾಗುತ್ತಿದೆ.

ಪ್ರತಿ ಕೆ.ಜಿ. ಗೂಡಿಗೆ 30 ರೂ. ಪ್ರೋತ್ಸಾಹಧನ

ರೇಷ್ಮೆ ಬೆಳೆಗಾರರಿಗೆ ಮಾರುಕಟ್ಟೆಯಲ್ಲಿ ದೊರೆಯುವ ಬೆಲೆಯ ಜೊತೆಗೆ ಹೆಚ್ಚುವರಿ ಪ್ರೋತ್ಸಾಹ ನೀಡುವ ಉದ್ದೇಶದಿಂದ ಪ್ರತಿ ಕೆ.ಜಿ. ರೇಷ್ಮೆ ಗೂಡಿಗೆ 30 ರೂ. ಪ್ರೋತ್ಸಾಹಧನ ನೀಡುವ ಯೋಜನೆಯೂ ಜಾರಿಯಲ್ಲಿದೆ. ಅಲ್ಲದೆ, ಪ್ರತಿ 100 ರೇಷ್ಮೆ ಮೊಟ್ಟೆಗಳಿಗೆ 1,000 ರೂ. ಪ್ರೋತ್ಸಾಹಧನ ನೀಡುವ ಸೌಲಭ್ಯವಿದೆ. ಇಂತಹ ಯೋಜನೆಗಳು ರೇಷ್ಮೆ ಕೃಷಿಯಲ್ಲಿ ತೊಡಗಿರುವ ರೈತರ ಆರ್ಥಿಕ ಸ್ಥಿತಿಗೆ ನೆರವಾಗಲಿವೆ.

ರೈತರಿಗೆ ಸಹಾಯಧನ ನೀಡುವುದರ ಜೊತೆಗೆ ಮಳೆನೀರು ಕೊಯ್ಲು, ಕೃಷಿ ಹೊಂಡಗಳ ನಿರ್ಮಾಣ, ಹನಿ ನೀರಾವರಿ ಬಳಕೆ ಹಾಗೂ ಅಂತರ್ಜಲ ಮರುಪೂರಣದಂತಹ ಕ್ರಮಗಳ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಬೇಕಿದೆ. ರೇಷ್ಮೆ ಕೃಷಿಗೆ ಆಸಕ್ತಿ ತೋರುವ ಹೊಸ ರೈತರಿಗೆ ತಾಂತ್ರಿಕ ಮಾರ್ಗದರ್ಶನ ಮತ್ತು ಅಗತ್ಯ ಸೌಲಭ್ಯಗಳನ್ನು ಸಕಾಲದಲ್ಲಿ ಒದಗಿಸುವುದೂ ಅಷ್ಟೇ ಮುಖ್ಯವಾಗಿದೆ.

ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಪದ್ಧತಿ ಅಳವಡಿಸಿಕೊಳ್ಳಿ: ವೆಂಕಟೇಶ್

“ಮುಂಜಾನೆಯ ಮೆರಗು”

ಜಗಳೂರು ನ, 16– ಮಳೆಯ ಕೊರತೆ ಹಾಗೂ ಅಂತರ್ಜಲ ಮಟ್ಟ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ರೈತರು ತೋಟಗಾರಿಕೆ ಬೆಳೆಗಳಿಗೆ ನೇರವಾಗಿ ನೀರು ಹರಿಸುವ ಪದ್ಧತಿಯನ್ನು ಕೈಬಿಟ್ಟು, ಹನಿ ನೀರಾವರಿ ಪದ್ಧತಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತೋಟಗಾರಿ–ಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ವೆಂಕಟೇಶ್ ರೈತರಿಗೆ ಸಲಹೆ ನೀಡಿದರು.

ಸೋಮವಾರ ಪಟ್ಟಣದ ತೋಟಗಾರಿ–ಕೆ ಇಲಾಖೆ ಕಚೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿದ ಅವರು, ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಸುರಿಯದಿರುವುದರಿಂದ ಕೃಷಿ ಚಟುವಟಿಕೆಗಳ ಮೇಲೆ ಪರಿಣಾಮ ಬೀರಿದೆ. ಮಳೆಯ ಅಭಾವದಿಂದ ಕೆರೆ–ಕಟ್ಟೆಗಳು ಹಾಗೂ ಅಂತರ್ಜಲ ಮೂಲಗಳಲ್ಲಿ ನೀರಿನ ಲಭ್ಯತೆ ಕಡಿಮೆಯಾಗುತ್ತಿದ್ದು, ದಿನದಿಂದ ದಿನಕ್ಕೆ ಅಂತರ್ಜಲ ಮಟ್ಟ ಕುಸಿಯುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಲಭ್ಯವಿರುವ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುವುದು ರೈತರ ಆದ್ಯ ಕರ್ತವ್ಯವಾಗಬೇಕು ಎಂದು ತಿಳಿಸಿದರು.

ತೋಟಗಾರಿಕೆ ಬೆಳೆಗಳಿಗೆ ಸಾಂಪ್ರದಾಯಿಕ ಪದ್ಧತಿಯಲ್ಲಿ ನೇರವಾಗಿ ನೀರು ಹರಿಸುವುದರಿಂದ ಹೆಚ್ಚಿನ ಪ್ರಮಾಣದ ನೀರು ವ್ಯರ್ಥವಾಗುವ ಸಾಧ್ಯತೆಯಿದೆ. ಆದ–ರೆ ಹನಿ ನೀರಾವರಿ ಪದ್ಧತಿಯಲ್ಲಿ ಗಿಡಗಳ



ಬೇರುಗಳಿಗೆ ಅಗತ್ಯವಿರುವಷ್ಟು ನೀರನ್ನು ಹನಿಹನಿಯಾಗಿ ಪೂರೈಸಬಹುದು. ಇದ–ರಿಂದ ನೀರಿನ ಉಳಿತಾಯದ ಜೊತೆಗೆ ಬೆಳೆಗಳಿಗೆ ಸಮರ್ಪಕವಾಗಿ ತೇವಾಂಶ ದೊರೆಯುತ್ತದೆ. ಅಲ್ಲದೆ, ಕಡಿಮೆ ನೀರಿನಲ್ಲಿಯೇ ಹೆಚ್ಚಿನ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಗಳನ್ನು ನಿರ್ವಹಿಸಲು ಅನುಕೂಲವಾಗಲಿದೆ ಎಂದರು.

ನೀರಿನ ಪ್ರತಿಯೊಂದು ಹನಿಯೂ ಅಮೂಲ್ಯವಾಗಿದ್ದು, ಮಳೆಯನ್ನೇ ಅವಲಂಬಿಸಿರುವ ಜಗಳೂರು ತಾಲೂಕಿನ ರೈತರು ಮುನ್ನೆಚ್ಚರಿಕೆ ವಹಿಸಿ ಲಭ್ಯವಿರುವ ಜಲಮೂಲಗಳನ್ನು ಮಿತವಾಗಿ ಬಳಸಿಕೊಳ್ಳಬೇಕು. ಭವಿಷ್ಯದಲ್ಲಿ ನೀರಿನ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳದಂತೆ ಪ್ರತಿಯೊಬ್ಬ ರೈತರೂ ಜಲಸಂರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.

ಬಿಕ್ಕಿಮಟ್ಟಿ ತಾಂಡಾದ ಅಭಿವೃದ್ಧಿಗೆ ಸದಾ ಬದ್ಧ: ಶಾಸಕ ಬಿ. ದೇವೇಂದ್ರಪ್ಪ

ಮರಿಯಮ್ಮ–ಸೇವಾಲಾಲ್ ನೂತನ ದೇವಸ್ಥಾನ ಉದ್ಘಾಟನೆ

“ಮುಂಜಾನೆಯ ಮೆರಗು”

ಜಗಳೂರು ನ, 16– ಅರಸೀಕೆರೆ ಸಮೀಪದ ಬಿಕ್ಕಿಮಟ್ಟಿ ತಾಂಡಾದಲ್ಲಿ ನೂತನವಾಗಿ ನಿರ್ಮಿಸಿರುವ ಮರಿಯಮ್ಮ–ಸೇವಾಲಾಲ್ ದೇವಸ್ಥಾನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಅವರು ಭಾಗವಹಿಸಿ, ದೇವರ ದರ್ಶನ ಪಡೆದು ವಿಶೇಷ ಪೂಜಾ ಕಾರ್ಯಗಳಲ್ಲಿ ಪಾಲ್ಗೊಂಡರು.

ಕಾರ್ಯಕ್ರಮಕ್ಕೆ ಆಗಮಿಸಿದ ಶಾಸಕರನ್ನು ತಾಂಡಾದ ಮಹಿಳೆಯರು ಬಂಜಾರ ಸಮುದಾಯದ ಸಾಂಪ್ರದಾಯಿಕ ಉಡುಗೆ ತೊಟ್ಟು, ಜಾನಪದ ನೃತ್ಯ ಪ್ರದರ್ಶಿಸುವ ಮೂಲಕ ಸಂಭ್ರಮದಿಂದ ಸ್ವಾಗತಿಸಿದರು. ತಾಂಡಾದ ಸಂಸ್ಕೃತಿ, ಸಂಪ್ರದಾಯ ಹಾಗೂ ಕಲಾ ವೈಭವವನ್ನು ಬಿಂಬಿಸುವ ನೃತ್ಯ ಪ್ರದರ್ಶನವು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.

ದೇವಸ್ಥಾನದ ಉದ್ಘಾಟನಾ ಕಾರ್ಯಕ್ರಮದ ಬಳಿಕ ತಾಂಡಾದ ಮುಖಂಡರು ಹಾಗೂ ಗ್ರಾಮಸ್ಥರು ಶಾಸಕರೊಂದಿಗೆ ಸ್ಥಳೀಯ ಸಮಸ್ಯೆಗಳ ಕುರಿತು ಚರ್ಚಿಸಿದರು. ತಾಂಡಾದಲ್ಲಿ



ಹಲವು ಮೂಲಸೌಕರ್ಯ ಸಮಸ್ಯೆಗಳಿದ್ದು, ಅವುಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿದರು.

ವಿಶೇಷವಾಗಿ ತಾಂಡಾದಲ್ಲಿ ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಸರ್ಕಾರಿ ಶಾಲೆಯನ್ನು ಮುಚ್ಚಿರುವ ವಿಚಾರವನ್ನು ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದರು. ಮಕ್ಕಳ ಶಿಕ್ಷಣದ ಹಿತದೃಷ್ಟಿಯಿಂದ ಶಾಲೆಯನ್ನು ಪುನರಾರಂಭಿಸುವ ಅಗತ್ಯವಿದ್ದು, ಇದರಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಮನವರಿಕೆ ಮಾಡಿಕೊಟ್ಟರು.

ಗ್ರಾಮಸ್ಥರ ಮನವಿಗೆ ತಕ್ಷಣ ಸ್ಪಂದಿಸಿದ ಶಾಸಕ ಬಿ. ದೇವೇಂದ್ರಪ್ಪ ಅವರು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಶಾಲೆಗೆ ಸಂಬಂಧಿಸಿದ ಸಂಪೂರ್ಣ ದಾಖಲೆಗಳೊಂದಿಗೆ ತಮ್ಮನ್ನು ಭೇಟಿಯಾಗುವಂತೆ ಸೂಚಿಸಿದರು. ಶಾಲೆಯ ಸ್ಥಿತಿಗತಿ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಅಧಿಕಾರಿಗಳೊಂದಿಗೆ ಚರ್ಚಿಸುವುದಾಗಿ ತಿಳಿಸಿದರು.

ಬಂಜಾರ ಸಮುದಾಯವು ತನ್ನದೇ ಆದ ವಿಶಿಷ್ಟ ಸಂಸ್ಕೃತಿ, ಸಂಪ್ರದಾಯ ಹಾಗೂ ಜೀವನಶೈಲಿಯನ್ನು ಹೊಂದಿದ್ದು, ಸಮಾಜದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ತಾಂಡಾಗಳಲ್ಲಿ ವಾಸಿಸುವ ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಹಾಗೂ ಅವರ ಅಭಿವೃದ್ಧಿಗೆ ಸಹಕಾರ ನೀಡುವುದು ನಮ್ಮ ಜವಾಬ್ದಾರಿಯಾಗಿದೆ. ಬಿಕ್ಕಿಮಟ್ಟಿ ತಾಂಡಾದ ಜನರೊಂದಿಗೆ ಹಾಗೂ ಬಂಜಾರ ಸಮುದಾಯದೊಂದಿಗೆ ಸದಾ ಇರುತ್ತೇವೆ. ಗ್ರಾಮದ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂಬ ಭರವಸೆಯನ್ನು ಶಾಸಕರು ನೀಡಿ–ದರು.

ಈ ಸಂದರ್ಭದಲ್ಲಿ ಬಿಕ್ಕಿಮಟ್ಟಿ ತಾಂಡಾದ ಸಮುದಾಯದ ಮುಖಂಡರು, ಹಿರಿಯರು, ಮಹಿಳೆಯರು, ಯುವಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಪಾಳು ಬಿದ್ದಿರುವ ಮಿನಿ ನೀರಿನ ಟ್ಯಾಂಕ್ ದುರಸ್ತಿಗೆ ಸಾರ್ವಜನಿಕರ ಒತ್ತಾಯ

“ಮುಂಜಾನೆಯ ಮೆರಗು”

ಜಗಳೂರು ನ, 16– ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ಹಲವು ವರ್ಷಗಳ ಹಿಂದೆ ನಿರ್ಮಿಸಲಾಗಿದ್ದ ಮಿನಿ ನೀರಿನ ಟ್ಯಾಂಕ್ ನಿರ್ವಹಣೆಯ ಕೊರತೆಯಿಂದಾಗಿ ಬಳಕೆಯಾಗದೆ ಪಾಳು ಬಿದ್ದಿದ್ದು, ಅದನ್ನು ತಕ್ಷಣ ದುರಸ್ತಿಪಡಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ತಾಲೂಕು ಪಂಚಾಯಿತಿ ಆವರಣದಲ್ಲಿ ನಿರ್ಮಿಸಲಾಗಿದ್ದ ಈ ಮಿನಿ ನೀರಿನ ಟ್ಯಾಂಕ್ ಹಲವು ವರ್ಷಗಳ ಕಾಲ ಸಾರ್ವಜನಿಕರಿಗೆ ಕುಡಿಯುವ ನೀರಿನ ಆಸರೆಯಾಗಿತ್ತು. ತಾಲೂಕು ಕೇಂದ್ರಕ್ಕೆ ತಮ್ಮ ವಿವಿಧ ಕೆಲಸಗಳ ನಿಮಿತ್ತ ತಾಲೂಕಿನ ಗ್ರಾಮೀಣ ಪ್ರದೇಶಗಳಿಂದ ಆಗಮಿಸುವ ರೈತರು, ಮಹಿಳೆಯರು, ವೃದ್ಧರು ಸೇರಿದಂತೆ



ನೂರಾರು ಜನರು ಈ ಟ್ಯಾಂಕ್‌ನ ನೀರನ್ನು ಕುಡಿಯಲು ಬಳಸುತ್ತಿದ್ದರು.

ಆದರೆ, ಇತ್ತೀಚಿನ ವರ್ಷಗಳಲ್ಲಿ ಸೂಕ್ತ ನಿರ್ವಹಣೆ ಹಾಗೂ ದುರಸ್ತಿಯ ಕೊರತೆಯಿಂದಾಗಿ ಟ್ಯಾಂಕ್ ಬಳಕೆಗೆ ಬಾರದ ಸ್ಥಿತಿಗೆ ತಲುಪಿದೆ. ಇದರಿಂದಾಗಿ ತಾಲೂಕು ಪಂಚಾಯಿತಿ ಕಚೇರಿಗೆ ಬರುವ ಸಾರ್ವಜನಿಕರು ಕುಡಿಯುವ ನೀರಿಗಾಗಿ ಪರದಾಡುವಂತಾಗಿದೆ.

ಖಾಲಿ ನಿವೇಶನಗಳಲ್ಲಿ ಬಳ್ಳಾರಿ ಜಾಲಿ ಕಾರುಬಾರು; ಸೊಳ್ಳೆ, ಹಂದಿಗಳ ಕಾಟಕ್ಕೆ ಜನರು ಹೈರಾಣ

ಸ್ವಚ್ಛತೆಗೆ ಆದ್ಯತೆ ನೀಡಿ, ಜಾಲಿ ಗಿಡಗಳನ್ನು ತೆರವುಗೊಳಿಸಲು ಸಾರ್ವಜನಿಕರ ಒತ್ತಾಯ

“ಮುಂಜಾನೆಯ ಮೆರಗು”

ಜಗಳೂರು ನ, 16– ಪಟ್ಟಣದ ಬಹುತೇಕ ವಾರ್ಡ್‌ಗಳಲ್ಲಿನ ಖಾಲಿ ನಿವೇಶನಗಳಲ್ಲಿ ಬಳ್ಳಾರಿ ಜಾಲಿ ಗಿಡಗಳ ಹಾವಳಿ ಮಿತಿ ಮೀರಿದ್ದು, ಸುತ್ತಮುತ್ತಲಿನ ನಿವಾಸಿಗಳು ನಾನಾ ಸಮಸ್ಯೆಗಳನ್ನು ಎದುರಿಸುವಂತಾಗಿದೆ.

ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಮನೆ ನಿರ್ಮಾಣ ಮಾಡುವ ಉದ್ದೇಶದಿಂದ ನಿವೇಶನಗಳನ್ನು ಖರೀದಿಸಿರುವ ಮಾಲೀಕರು ವರ್ಷಗಳು ಕಳೆದರೂ ಕಟ್ಟಡ ನಿರ್ಮಾಣ ಮಾಡದೆ ಹಾಗೆಯೇ ಖಾಲಿ ಬಿಟ್ಟಿದ್ದಾರೆ. ಇದರಿಂದ ನಿವೇಶನಗಳಲ್ಲಿ ಬಳ್ಳಾರಿ ಜಾಲಿ ಸೇರಿದಂತೆ ವಿವಿಧ ಜಾತಿಯ ಗಿಡಗಂಟಿಗಳು, ಕಳೆಗಳು ದಟ್ಟವಾಗಿ ಬೆಳೆದು ಪೊದೆಗಳಾಗಿ ಮಾರ್ಪಟ್ಟಿವೆ. ಕೆಲವು ನಿವೇಶನಗಳು ಸಣ್ಣ ಕಾಡಿನಂತೆಯೇ ಗೋಚರಿಸುತ್ತಿವೆ.

ಖಾಲಿ ನಿವೇಶನಗಳಲ್ಲಿ ಬೆಳೆದಿರುವ ಗಿಡಗಂಟಿಗಳಿಂದ ಅಕ್ಕಪಕ್ಕದ ಮನೆಗಳ ನಿವಾಸಿಗಳಿಗೆ ಸಾಕಷ್ಟು ತೊಂದರೆ–ಯಾಗುತ್ತಿದೆ. ಜಾಲಿ ಗಿಡಗಳ ಪೊದೆಗಳಲ್ಲಿ ಸೊಳ್ಳೆ, ಕೀಟಗಳು ಹಾಗೂ ವಿಷಜಂತುಗಳು ಆಶ್ರಯ ಪಡೆಯುತ್ತಿದ್ದು, ಜನರಲ್ಲಿ ಆತಂಕ ಮೂಡಿಸಿವೆ. ಅಲ್ಲದೆ, ಈ ಪ್ರದೇಶಗಳು ಬೀಡಾಡಿ ದನಗಳು ಮತ್ತು ಹಂದಿಗಳ ಆವಾಸಸ್ಥಾನಗಳಾಗಿ ಪರಿವರ್ತನೆಯಾಗಿವೆ. ಹಂದಿಗಳು ಹಾಗೂ ಬೀಡಾಡಿ ದನಗಳ ಸಂಚಾರದಿಂದ ಬಡಾವಣೆಗಳ ಸ್ವಚ್ಛತೆಗೂ ಧಕ್ಕೆಯಾಗುತ್ತಿದೆ.

ಮಳೆಗಾಲದಲ್ಲಿ ಖಾಲಿ ನಿವೇಶನಗಳಲ್ಲಿ ನೀರು ನಿಂತು ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗುತ್ತಿದ್ದರೆ, ಬೇಸಿಗೆಯಲ್ಲಿ ಒಣಗಿದ ಗಿಡಗಂಟೆಗಳು ಬೆಂಕಿ ಅವಘಡ ಸಂಭವಿಸುವ ಆತಂಕವನ್ನೂ ಸೃಷ್ಟಿಸುತ್ತಿವೆ. ಅಕ್ಕಪಕ್ಕದ ಮನೆಗಳಲ್ಲಿ ವಾಸಿಸುವ ಕುಟುಂಬಗಳು ನಿತ್ಯವೂ ಈ ಸಮಸ್ಯೆಗಳನ್ನು ಎದುರಿಸುತ್ತಿದ್ದರೂ ನಿವೇಶನಗಳ ಮಾಲೀಕರ

ಗರ್ಭಕಂಠದ ಕ್ಯಾನ್ಸರ್ ತಡೆಗೆ ಹೆಚ್ ಪಿವಿ ಲಸಿಕೆ ಅಗತ್ಯ: ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್

ವಿದ್ಯಾರ್ಥಿನಿಯರೊಂದಿಗೆ ಕುಳಿತು ಧೈರ್ಯ ತುಂಬಿದ ಸಂಸದೆ

"ಮುಂಜಾನೆಯ ಮೆರಗು"

ದಾವಣಗೆರೆ ನ, 16– ಹೆಣ್ಣುಮಕ್ಕಳ ಆರೋಗ್ಯ ರಕ್ಷಣೆ ಹಾಗೂ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವ ನಿಟ್ಟಿನಲ್ಲಿ ಹೆಚ್ ಪಿವಿ ಲಸಿಕೆಯು ಮಹತ್ವದ ಪಾತ್ರ ವಹಿಸುತ್ತದೆ. ಈ ಕುರಿತು ಪೋಷಕರು ಜಾಗೃತಿ ಹೊಂದಿ, ಅರ್ಹ ಹೆಣ್ಣುಮಕ್ಕಳಿಗೆ ಲಸಿಕೆ ಹಾಕಿಸಲು ಮುಂದಾಗಬೇಕು ಎಂದು ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಹೊನ್ನಾಳಿ ತಾಲ್ಲೂಕಿನ ಅರಬಗಟ್ಟ ಗ್ರಾಮದಲ್ಲಿ ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಉಚಿತ ಹೆಚ್ ಪಿವಿ ಲಸಿಕಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಶಾಲಾ ವಿದ್ಯಾರ್ಥಿನಿಯರಿಗೆ ಲಸಿಕೆ ನೀಡುವ ಪ್ರಕ್ರಿಯೆಯನ್ನು ವೀಕ್ಷಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರೊಂದಿಗೆ ಕುಳಿತು ಆತ್ಮೀಯವಾಗಿ ಮಾತುಕತೆ ನಡೆಸಿದ ಸಂಸದರು, ಲಸಿಕೆ ಪಡೆಯುವ ಮಕ್ಕಳಿಗೆ ಧೈರ್ಯ ತುಂಬಿದರು. ಆರೋಗ್ಯ ಸಿಬ್ಬಂದಿಯಿಂದ ವಿದ್ಯಾರ್ಥಿನಿಯರಿಗೆ ಲಸಿಕೆ



ಹಾಕಿಸುವ ಸಂದರ್ಭದಲ್ಲಿ ಅವರೊಂದಿಗೆ ಇದ್ದು, ಮಕ್ಕಳಲ್ಲಿ ಆತ್ಮವಿಶ್ವಾಸ ಮೂಡಿಸಿದರು.

'ಗರ್ಭಕಂಠದ ಕ್ಯಾನ್ಸರ್ ಮಹಿಳೆಯರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಕಾಯಿಲೆಗಳಲ್ಲಿ ಒಂದಾಗಿದೆ. ಹೆಚ್‌ಪಿವಿ ಲಸಿಕೆಯ ಮೂಲಕ ಈ ಕ್ಯಾನ್ಸರ್ನ ಅಪಾಯವನ್ನು ಗಣನೀಯವಾಗಿ ಕಡಿಮೆ ಮಾಡಬಹುದಾಗಿದೆ. ಆದ್ದರಿಂದ ಹೆಣ್ಣುಮಕ್ಕಳಿಗೆ ಸೂಕ್ತ ವಯಸ್ಸಿನಲ್ಲಿ ಲಸಿಕೆ ದೊರೆಯುವಂತೆ ನೋಡಿಕೊಳ್ಳುವುದು ಅತ್ಯಂತ ಅಗತ್ಯ' ಎಂದು ತಿಳಿಸಿದರು.

'ಹೆಣ್ಣುಮಕ್ಕಳ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಕೇವಲ ಕುಟುಂಬದ ಜವಾಬ್ದಾರಿಯಲ್ಲ, ಸಮಾಜದ ಒಟ್ಟಾರೆ ಹೊಣೆಗಾರಿಕೆಯಾಗಿದೆ. ಕಾಯಿಲೆ ಬಂದ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ ಮುನ್ನೆಚ್ಚರಿಕಾ ಕ್ರಮಗಳ ಮೂಲಕ ಆರೋಗ್ಯ ಕಾಪಾಡಿಕೊಳ್ಳುವುದು ಮುಖ್ಯ. ಈ ನಿಟ್ಟಿನಲ್ಲಿ ಸರ್ಕಾರದ ಉಚಿತ ಲಸಿಕಾ ಕಾರ್ಯಕ್ರಮಗಳ ಕುರಿತು ಗ್ರಾಮೀಣ ಭಾಗದಲ್ಲಿಯೂ ಹೆಚ್ಚಿನ ಅರಿವು ಮೂಡಿಸಬೇಕಿದೆ' ಎಂದು ಅಭಿಪ್ರಾಯಪಟ್ಟರು.

ಅರ್ಹ ಹೆಣ್ಣುಮಕ್ಕಳಿಗೆ ಲಸಿಕಾ ಸೌಲಭ್ಯ ತಲುಪಿಸುವಲ್ಲಿ ಪೋಷಕರು, ಶಿಕ್ಷಕರು ಹಾಗೂ ಆರೋಗ್ಯ ಸಿಬ್ಬಂದಿಯ ಸಹಕಾರ ಮುಖ್ಯವಾಗಿದೆ. ಮಕ್ಕಳ ಆರೋಗ್ಯ ರಕ್ಷಣೆಗಾಗಿ ಇಂತಹ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ, ವೈದ್ಯರು ಹಾಗೂ ಶಾಲಾ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಬಸವಾಪಟ್ಟಣದಲ್ಲಿ 90 ಲಕ್ಷ ವೆಚ್ಚದ ಬೆಸ್ಕಾಂ ಶಾಖಾ ಕಚೇರಿಗೆ ಶಂಕುಸ್ಥಾಪನೆ

"ಮುಂಜಾನೆಯ ಮೆರಗು"

ಚನ್ನಗಿರಿ ನ, 16– ಬಸವಾಪಟ್ಟಣದ ಬೆಸ್ಕಾಂ ಕಾಲೋನಿಯಲ್ಲಿ 90 ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಂ) ಕಾರ್ಯ ಮತ್ತು ಪಾಲನೆ ವಿಭಾಗದ ನೂತನ ಶಾಖಾ ಕಚೇರಿ ಕಟ್ಟಡಕ್ಕೆ ಸಚಿವ ಕೆ.ಎಸ್. ಬಸವಂತಪ್ಪ ಶಂಕುಸ್ಥಾಪನೆ ನೆರವೇರಿಸಿದರು.



ಬಸವಾಪಟ್ಟಣದಲ್ಲಿ ಬೆಸ್ಕಾಂ ಇಲಾಖೆಯ ಕಾರ್ಯನಿರ್ವಹಣೆಯನ್ನು ಮತ್ತಷ್ಟು ಸುಗಮಗೊಳಿಸುವ ಹಾಗೂ ಸಾರ್ವಜನಿಕರಿಗೆ ಉತ್ತಮ ವಿದ್ಯುತ್ ಸೇವೆ ಒದಗಿಸುವ ಉದ್ದೇಶದಿಂದ ನೂತನ ಕಚೇರಿ ಕಟ್ಟಡ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ.

ನೂತನ ಕಟ್ಟಡ ನಿರ್ಮಾಣದಿಂದ ಬೆಸ್ಕಾಂ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಅಗತ್ಯ ಕಾರ್ಯನಿರ್ವಹಣಾ ಸೌಲಭ್ಯಗಳು ದೊರೆಯಲಿದ್ದು, ವಿದ್ಯುತ್ ಸಂಬಂಧಿತ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಲು ಅನುಕೂಲವಾಗಲಿದೆ. ಇದರಿಂದ ಸ್ಥಳೀಯ ಗ್ರಾಹಕರಿಗೆ ಉತ್ತಮ ಸೇವೆ ಒದಗಿಸಲು ಸಹಕಾರಿಯಾಗಲಿದೆ.

ಈ ಸಂದರ್ಭದಲ್ಲಿ ಬೆಸ್ಕಾಂ ಇಲಾಖೆಯ ಅಧಿಕಾರಿಗಳು, ಗಣ್ಯರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಸಹಕಾರ ಸಂಸ್ಥೆಗಳಲ್ಲಿ ತಂತ್ರಜ್ಞಾನ ಅಳವಡಿಕೆಗೆ ಆದ್ಯತೆ ನೀಡಿ: ಸಚಿವ ಕೆ.ಎಸ್. ಬಸವಂತಪ್ಪ

ಗುಡಾಲು ಗ್ರಾಮದಲ್ಲಿ 73ನೇ ಅಖಿಲ ಭಾರತ ಸಹಕಾರ ಸಪ್ತಾಹ–2026 ಕಾರ್ಯಕ್ರಮ ಉದ್ಘಾಟನೆ

"ಮುಂಜಾನೆಯ ಮೆರಗು"

ದಾವಣಗೆರೆ ನ, 16– ಸಹಕಾರ ಸಂಸ್ಥೆಗಳ ಕಾರ್ಯವೈಖರಿಯಲ್ಲಿ ಆಧುನಿಕ ತಂತ್ರಜ್ಞಾನ ಮತ್ತು ಡಿಜಿಟಲೀಕರಣವನ್ನು ಅಳವಡಿಸಿಕೊಳ್ಳುವ ಮೂಲಕ ಅವುಗಳನ್ನು ಮತ್ತಷ್ಟು ಬಲಿಷ್ಠ, ಪಾರದರ್ಶಕ ಹಾಗೂ ಜನಸ್ನೇಹಿಯಾಗಿ ರೂಪಿಸುವುದು ಇಂದಿನ ಅಗತ್ಯವಾಗಿದೆ ಎಂದು ಸಚಿವ ಕೆ.ಎಸ್. ಬಸವಂತಪ್ಪ ಹೇಳಿದರು.

ಮಾಯಕೊಂಡ ವಿಧಾನಸಭಾ ಕ್ಷೇತ್ರದ ಗುಡಾಲು ಗ್ರಾಮದಲ್ಲಿ ಆಯೋಜಿಸಲಾಗಿದ್ದ 73ನೇ ಅಖಿಲ ಭಾರತ ಸಹಕಾರ ಸಪ್ತಾಹ–2026ರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರ ಕ್ಷೇತ್ರವು ಗ್ರಾಮೀಣ ಆರ್ಥಿಕ ವ್ಯವಸ್ಥೆಯ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ರೈತರು, ಕಾರ್ಮಿಕರು ಹಾಗೂ ಸಾಮಾನ್ಯ ಜನರಿಗೆ ಆರ್ಥಿಕ ಮತ್ತು ಸಾಮಾಜಿಕವಾಗಿ ನೆರವಾಗುವಲ್ಲಿ ಸಹಕಾರ ಸಂಸ್ಥೆಗಳ ಕೊಡುಗೆ ಮಹತ್ವದ್ದಾಗಿದೆ. ಈ ಸಂಸ್ಥೆಗಳು ಕಾಲಕ್ಕೆ ತಕ್ಕಂತೆ ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಂಡು ತಮ್ಮ ಸೇವಾ ವ್ಯವಸ್ಥೆಯನ್ನು ಸುಧಾರಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಹಕಾರ ಸಂಸ್ಥೆಗಳ ಕಾರ್ಯಚಟುವಟಿಕೆಗಳಲ್ಲಿ ಪಾರದರ್ಶಕತೆ, ಜವಾಬ್ದಾರಿ ಮತ್ತು ಜನಸ್ನೇಹಿ ಆಡಳಿತಕ್ಕೆ ಹೆಚ್ಚಿನ ಒತ್ತು ನೀಡಬೇಕು. ಸಹಕಾರ ಕ್ಷೇತ್ರದ ಸಮಗ್ರ ಬೆಳವಣಿಗೆ ಹಾಗೂ ಬಲವರ್ಧನೆಗೆ ಎಲ್ಲರೂ ಒಗ್ಗಟ್ಟಿನಿಂದ ಕೈಜೋಡಿಸಬೇಕು



ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ದಾವಣಗೆರೆ ಜಿಲ್ಲೆಯ ವಿವಿಧ ಸಹಕಾರ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಪ್ರತಿನಿಧಿಗಳು ಉಪಸ್ಥಿತರಿದ್ದರು.

ನೀರಾವರಿ ಸೌಲಭ್ಯದಿಂದ ಪರಿಶಿಷ್ಟ ಪಂಗಡದ ರೈತರ ಆರ್ಥಿಕ ಸ್ವಾವಲಂಬನೆಗೆ ಆದ್ಯತೆ: ಸಚಿವ ಟಿ. ರಘುಮೂರ್ತಿ

"ಮುಂಜಾನೆಯ ಮೆರಗು"

ಚಿತ್ರದುರ್ಗ ನ, 16– ಪರಿಶಿಷ್ಟ ಪಂಗಡದ ರೈತರು ಮಳೆಯಾಶ್ರಿತ ಕೃಷಿಯಿಂದ ಹೊರಬಂದು ನೀರಾವರಿ ಸೌಲಭ್ಯದ ಮೂಲಕ ಉತ್ತಮ ಬೆಳೆ ಬೆಳೆದು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂಬ ಉದ್ದೇಶದಿಂದ ಸರ್ಕಾರ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ ಎಂದು ಸಚಿವ ಟಿ. ರಘುಮೂರ್ತಿ ತಿಳಿಸಿದರು.



ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಪರಶುರಾಂಪುರ ಹೋಬಳಿಯಲ್ಲಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಪಂಪು ಮೋಟಾರ್ ಹಾಗೂ ಇತರೆ ಅಗತ್ಯ ಸಾಮಗ್ರಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಕೃಷಿ ಕ್ಷೇತ್ರದಲ್ಲಿ ನೀರಾವರಿ ಸೌಲಭ್ಯ ಅತ್ಯಂತ ಮಹತ್ವದ್ದಾಗಿದೆ. ಮಳೆಯನ್ನೇ ಅವಲಂಬಿಸಿ ಕೃಷಿ ಮಾಡುವ ರೈತರಿಗೆ ನೀರಿನ ಸೌಲಭ್ಯ ದೊರೆತರೆ ವರ್ಷಪೂರ್ತಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಹಾಗೂ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಅರ್ಹ ರೈತರಿಗೆ ಪಂಪು ಮೋಟಾರ್ ಸೇರಿದಂತೆ ಅಗತ್ಯ ಪರಿಕರಗಳನ್ನು ಒದಗಿಸಲಾಗುತ್ತಿದೆ ಎಂದರು.

ರೈತರ ಜಮೀನಿಗೆ ನೀರು ಒದಗಿಸುವುದರ ಜೊತೆಗೆ ಅವರ ಬದುಕಿಗೆ ಭರವಸೆ ತುಂಬಿ ಕುಟುಂಬಗಳು ಆರ್ಥಿಕವಾಗಿ ಸ್ವಾವಲಂಬಿಗಳಾಗುವಂತೆ ಮಾಡುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ. ಸರ್ಕಾರದ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಮೂಲಕ ಪರಿಶಿಷ್ಟ ಪಂಗಡದ ಸಮುದಾಯದ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಿಗಮದ ಅಧಿಕಾರಿಗಳು, ಫಲಾನುಭವಿಗಳು, ಸ್ಥಳೀಯ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಫುಡ್ ಕಿಯೋಸ್ಕ್ ಮೂಲಕ ಸ್ವಯಂ ಉದ್ಯೋಗ

ಘಟಕ ವೆಚ್ಚದ ಶೇ.75ರಷ್ಟು ಅಥವಾ ಗರಿಷ್ಠ 4 ಲಕ್ಷ ಸಹಾಯಧನ: ಸಚಿವ ಟಿ. ರಘುಮೂರ್ತಿ

"ಮುಂಜಾನೆಯ ಮೆರಗು"

ಬೆಂಗಳೂರು ನ, 16– ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ–ಯುವತಿಯರಿಗೆ ಸ್ವಯಂ ಉದ್ಯೋಗದ ಅವಕಾಶ ಕಲ್ಪಿಸುವ ಉದ್ದೇಶದಿಂದ ಫುಡ್ ಟ್ರಕ್, ಟ್ರೈಲರ್ ಹಾಗೂ ಮೊಬೈಲ್ ಕಿಚನ್ ಫುಡ್ ಕಿಯೋಸ್ಕ್ ಆರಂಭಿಸಲು ರಾಜ್ಯ ಸರ್ಕಾರ ವಿಶೇಷ ಯೋಜನೆ ಜಾರಿಗೆ ತರಲು ಮುಂದಾಗಿದೆ. ಈ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.75ರಷ್ಟು ಅಥವಾ ಗರಿಷ್ಠ 4 ಲಕ್ಷದವರೆಗೆ ಸಹಾಯಧನ ನೀಡಲಾಗುವುದು ಎಂದು ಸಚಿವ ಟಿ. ರಘುಮೂರ್ತಿ ತಿಳಿಸಿದರು.

ಪರಿಶಿಷ್ಟ ಪಂಗಡದ ಯುವಜನರಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸಿ ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡುವ ಉದ್ದೇಶದಿಂದ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ



ನಿಗಮಗಳ ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಡಿ ಈ ಸೌಲಭ್ಯ ಕಲ್ಪಿಸಲಾಗುತ್ತಿದೆ. ಇತ್ತೀಚಿನ ಸಚಿವ ಸಂಪುಟ ಸಭೆಯಲ್ಲಿ ಯೋಜನೆಗೆ ಅನುಮೋದನೆ ದೊರೆತಿದೆ ಎಂದು ಅವರು ತಿಳಿಸಿದರು.

ಕಳೆದ ಬಜೆಟ್‌ನಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಯೋಜನೆ ಆರಂಭಿಸುವುದಾಗಿ ಘೋಷಿಸಿದ್ದರು. ಬಳಿಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಇಲಾಖೆಯ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ಸಚಿವ ಸಂಪುಟದಲ್ಲಿ ಚರ್ಚೆ ನಡೆದು ಯೋಜನೆಗೆ ಅನುಮೋದನೆ ದೊರೆಯುವಂತೆ ಕ್ರಮ ವಹಿಸಲಾಗಿದೆ ಎಂದು ಹೇಳಿದರು.

ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಬ್ಯಾಂಕ್ ಹಾಗೂ ಹಣಕಾಸು ಸಂಸ್ಥೆಗಳ ಮೂಲಕ ಸಾಲ ಸೌಲಭ್ಯ ಮತ್ತು ಸರ್ಕಾರದ ಸಹಾಯಧನ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡದ ಅಡಿಯಲ್ಲಿ ಆದಿವಾಸಿಗಳು ಸೇರಿದಂತೆ 50ಕ್ಕೂ ಹೆಚ್ಚು ಸಮುದಾಯಗಳು ಬರುತ್ತಿದ್ದು, ಪಟ್ಟಿಯಲ್ಲಿರುವ ಎಲ್ಲ ಸಮುದಾಯಗಳ ಅರ್ಹ ಫಲಾನುಭವಿಗಳಿಗೂ ಈ ಯೋಜನೆ ಅನ್ವಯವಾಗಲಿದೆ ಎಂದು ಸ್ಪಷ್ಟಪಡಿಸಿದರು.

ಈ ಯೋಜನೆಯಿಂದ ಪರಿಶಿಷ್ಟ ಪಂಗಡದ ಯುವಜನರಿಗೆ ಸ್ವಂತ ಉದ್ಯಮ ಆರಂಭಿಸಲು ಅವಕಾಶ ದೊರೆಯುವುದರೊಂದಿಗೆ ಅವರ ಆರ್ಥಿಕ ಸಬಲೀಕರಣಕ್ಕೂ ನೆರವಾಗಲಿದೆ. ಪ್ರಮಾಣೀಕೃತ ಮೊಬೈಲ್ ಆಹಾರ ಘಟಕಗಳ ಮೂಲಕ ಗುಣಮಟ್ಟದ ಆಹಾರ ಒದಗಿಸಲು ಹಾಗೂ ಆಹಾರ ಮಾರಾಟ ವ್ಯವಸ್ಥೆಯನ್ನು ವ್ಯವಸ್ಥಿತಗೊಳಿಸಲು ಸಹಕಾರಿಯಾಗಲಿದೆ. ಈ ಯೋಜನೆಯಿಂದ ಸಾವಿರಾರು ಯುವಕ–ಯುವತಿಯರಿಗೆ ಸ್ವಯಂ ಉದ್ಯೋಗದ ಅವಕಾಶ ದೊರೆಯುವ ನಿರೀಕ್ಷೆಯಿದೆ. ಮುಂದಿನ ದಿನಗಳಲ್ಲಿಯೂ ಸಮುದಾಯದ ಆರ್ಥಿಕ ಅಭಿವೃದ್ಧಿಗೆ ಪೂರಕವಾದ ಇಂತಹ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗುವುದು ಎಂದು ಸಚಿವ ಟಿ. ರಘುಮೂರ್ತಿ ತಿಳಿಸಿದರು.

ತಳಮಟ್ಟದಲ್ಲಿ ಕಾಂಗ್ರೆಸ್ ಸಂಘಟನೆ ಬಲಪಡಿಸಲು ಸಚಿವ ಕೆ.ಎಸ್. ಬಸವಂತಪ್ಪ ಕರೆ

"ಮುಂಜಾನೆಯ ಮೆರಗು"

ದಾವಣಗೆರೆ ನ, 16– ಜಿಲ್ಲೆಯ ಮಾಯಕೊಂಡ ವಿಧಾನಸಭಾ ಕ್ಷೇತ್ರದ ಆನಗೋಡು ಗ್ರಾಮದ ಶ್ರೀ ವಾಲ್ಮೀಕಿ ಸಮುದಾಯ ಭವನದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಆಯೋಜಿಸಲಾಗಿದ್ದ 'ಸಂಘಟನ್ ಸೃಜನ್ ಅಭಿಯಾನ್–2' ಸಂಘಟನಾ ಸಭೆಯಲ್ಲಿ ಸಚಿವ ಕೆ.ಎಸ್. ಬಸವಂತಪ್ಪ ಅವರು ಭಾಗವಹಿಸಿ ಪಕ್ಷದ ಸಂಘಟನೆಯನ್ನು ಬಲಪಡಿಸುವ ಕುರಿತು ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಸಮಾಲೋಚನೆ ನಡೆಸಿದರು.



ಸಭೆಯಲ್ಲಿ ಪಕ್ಷದ ಸಂಘಟನೆಯನ್ನು ತಳಮಟ್ಟದಲ್ಲಿ ಮತ್ತಷ್ಟು ಬಲಪಡಿಸುವುದು, ಬೂತ್ ಮಟ್ಟದಿಂದ ಪಕ್ಷದ ಕಾರ್ಯಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ರೂಪಿಸುವುದು ಹಾಗೂ ಕಾರ್ಯಕರ್ತರನ್ನು ಸಕ್ರಿಯವಾಗಿ ಸಂಘಟಿಸುವ ಕುರಿತು ಚರ್ಚಿಸಲಾಯಿತು. ಪಕ್ಷದ ಸಿದ್ಧಾಂತ ಮತ್ತು ಸರ್ಕಾರದ ಜನಪರ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಕಾರ್ಯಕರ್ತರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂಬ ಅಭಿಪ್ರಾಯ ವ್ಯಕ್ತವಾಯಿತು.

ಮುಂಬರುವ ದಿನಗಳಲ್ಲಿ ಪಕ್ಷದ ಸಂಘಟನಾತ್ಮಕ ಚಟುವಟಿಕೆಗಳನ್ನು ಚುರುಕುಗೊಳಿಸುವುದು, ಸ್ಥಳೀಯ ಮಟ್ಟದಲ್ಲಿ ಪಕ್ಷದ ಬಲವರ್ಧನೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಸೇರಿದಂತೆ ವಿವಿಧ ವಿಚಾರಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯ ಪ್ರಸನ್ನ ಕುಮಾರ್, ಕೆಪಿಸಿಸಿ ವೀಕ್ಷಕರಾದ ಅನಿತಾ ಕುಮಾರಿ, ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಇಬ್ರಾಹಿಂ ಖಲೀಲುಲ್ಲಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪಕ್ಷದ ಹಿರಿಯ ಮುಖಂಡರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಉಪಸ್ಥಿತರಿದ್ದರು.

ನವೆಂಬರ್ 18ರಿಂದ ದಾವಣಗೆರೆಯಲ್ಲಿ ಬೃಹತ್ ಇ–ಆಸ್ತಿ ಅಭಿಯಾನ

ಅರ್ಹ ಅರ್ಜಿಗಳಿಗೆ 72 ಗಂಟೆಗಳೊಳಗೆ ಇ–ಖಾತಾ ವಿತರಣೆ: ಶಾಸಕ ಸಮರ್ಥ್ ಶಾಮನೂರು

"ಮುಂಜಾನೆಯ ಮೆರಗು"

ದಾವಣಗೆರೆ ನ, 16– ನಗರದ ಆಸ್ತಿ ಮಾಲೀಕರಿಗೆ ಇ–ಖಾತಾ ಸೇವೆಯನ್ನು ಸರಳ, ತ್ವರಿತ ಹಾಗೂ ಪಾರದರ್ಶಕವಾಗಿ ಒದಗಿಸುವ ಉದ್ದೇಶದಿಂದ ದಾವಣಗೆರೆ ಮಹಾನಗರಪಾಲಿಕೆ ವತಿಯಿಂದ ನವೆಂಬರ್ 18ರಿಂದ ಬೃಹತ್ ಇ–ಆಸ್ತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಸಮರ್ಥ್ ಶಾಮನೂರು ತಿಳಿಸಿದರು.

ಈ ಕುರಿತು ಮಹಾನಗರಪಾಲಿಕೆಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಮೂರು ವಲಯ ಕಚೇರಿಗಳಲ್ಲಿ ಪ್ರತಿದಿನ ಬೆಳಿಗ್ಗೆ 10.30ರಿಂದ ಸಂಜೆ 4 ಗಂಟೆಯವರೆಗೆ ಅಭಿಯಾನ ನಡೆಯಲಿದೆ. ಇದುವರೆಗೆ ಇ–ಖಾತಾ ಪಡೆಯದ ಆಸ್ತಿ ಮಾಲೀಕರು ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ವಲಯ ಕಚೇರಿಗೆ ಭೇಟಿ ನೀಡಿ ಅರ್ಜಿ



ಸಲ್ಲಿಸಬಹುದಾಗಿದೆ ಎಂದರು.

ಅರ್ಜಿ ಸ್ವೀಕಾರ, ದಾಖಲೆಗಳ ಪರಿಶೀಲನೆ ಹಾಗೂ ಆಧಾರ್ ಆಧಾರಿತ ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಂಡು, ಯಾವುದೇ ಲೋಪದೋಷಗಳಿಲ್ಲದ ದಾಖಲೆಗಳೊಂದಿಗೆ ಅರ್ಜಿ ಸ್ವೀಕರಿಸಿದ ದಿನದಿಂದ 72 ಗಂಟೆಗಳೊಳಗೆ ಇ–ಖಾತಾ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಈಗಾಗಲೇ ದಾವಣಗೆರೆ ಮ

ಬಸವ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ: ಸಚಿವ ಈಶ್ವರ ಖಂಡ್ರೆ



"ಮುಂಜಾನೆಯ ಮೆರಗು"

ಕಲಬುರಗಿ ನ, 16– ಸಮಸಮಾಜದ ಕನಸು ಕಂಡ ವಿಶ್ವಗುರು ಬಸವಣ್ಣನವರ ಸಮಾನತೆ, ಸಹೋದರತ್ವ ಮತ್ತು ಕಾಯಕ ನಿಷ್ಠೆಯ ಸಂದೇಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಹೇಳಿದರು.

ಕಲಬುರಗಿ ಜಿಲ್ಲೆಯ ಹರಸೂರ ಗ್ರಾಮದಲ್ಲಿ ನೂತನವಾಗಿ ಪ್ರತಿಷ್ಠಾಪಿಸಲಾಗಿರುವ ವಿಶ್ವಗುರು ಬಸವಣ್ಣನವರ ಅಶ್ವಾರೂಢ ಮೂರ್ತಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಬಸವಣ್ಣನವರು ಸಾರಿದ ಸಮಾನತೆ, ಸಹೋದರತ್ವ, ಕಾಯಕ ಮತ್ತು ದಾಸೋಹದ ತತ್ವಗಳು ಇಂದಿಗೂ ಪ್ರಸ್ತುತವಾಗಿವೆ. ಸಮಾಜದಲ್ಲಿ ಜಾತಿ, ಧರ್ಮದ ಭೇದಭಾವವಿಲ್ಲದೆ ಎಲ್ಲರೂ ಸಮಾನತೆಯಿಂದ ಬದುಕುವ ವಾತಾವರಣ ನಿರ್ಮಾಣವಾಗಬೇಕು. ಕೇವಲ ಮೂರ್ತಿಗಳನ್ನು ಪ್ರತಿಷ್ಠಾಪಿಸುವುದರಿಂದ ಬಸವಣ್ಣನವರಿಗೆ ಗೌರವ ಸಲ್ಲಿಸಿದಂತಾಗುವುದಿಲ್ಲ. ಅವರು ಬೋಧಿಸಿದ ವಿಚಾರಧಾರೆಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಮುನ್ನಡೆಯುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ ಎಂದು ತಿಳಿಸಿದರು.

ಬಸವಣ್ಣನವರ ತತ್ವಾದರ್ಶಗಳ ಅಡಿಯಲ್ಲಿ ಎಲ್ಲರೂ ಒಗ್ಗಟ್ಟಾಗಿ ಸುಂದರ, ಸಮಾನತೆ ಮತ್ತು ಸಹಬಾಳ್ವೆಯ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪೂಜ್ಯ ಸ್ವಾಮೀಜಿಗಳು, ಶಾಸಕರಾದ ಬಸವರಾಜ ಮತ್ತಿಮೂಡ್, ಶರಣು ಸಾಲಗಾರ, ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಶರಣಕುಮಾರ ಮೋದಿ, ಮಾಜಿ ಶಾಸಕ ಅಮರನಾಥ ಪಾಟೀಲ್, ಆಯೋಜನಾ ಸಮಿತಿ ಸದಸ್ಯರು ಹಾಗೂ ಸಾವಿರಾರು ಬಸವಾನುಯಾಯಿಗಳು ಉಪಸ್ಥಿತರಿದ್ದರು.

ಗ್ರಾಮಗಳ ಅಭಿವೃದ್ಧಿ ಮತ್ತು ಮಕ್ಕಳ ಸಮಗ್ರ ಬೆಳವಣಿಗೆಗೆ ಆದ್ಯತೆ: ಸಂಸದೆ ಪ್ರಿಯಾಂಕಾ ಜಾರಕಿಹೊಳಿ



"ಮುಂಜಾನೆಯ ಮೆರಗು"

ಚಿಕ್ಕೋಡಿ ನ, 16– ಗ್ರಾಮೀಣ ಪ್ರದೇಶಗಳಲ್ಲಿ ಸಹಕಾರ ಕ್ಷೇತ್ರವನ್ನು ಬಲಪಡಿಸುವುದರ ಜೊತೆಗೆ ಮಕ್ಕಳಿಗೆ ಗುಣಮಟ್ಟದ ಪ್ರಾಥಮಿಕ ಆರೈಕೆ ಹಾಗೂ ಪೂರ್ವಪ್ರಾಥಮಿಕ ಶಿಕ್ಷಣ ಒದಗಿಸಲು ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಆದ್ಯತೆಯಾಗಿದೆ ಎಂದು ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಹೇಳಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಯಮಕನಮರಡಿ ವಿಧಾನಸಭಾ ವ್ಯಾಪ್ತಿಯ ಮುಚ್ಚಂಡಿ ಗ್ರಾಮದಲ್ಲಿ ಶ್ರೀ ಸಿದ್ದೇಶ್ವರ ಕೋ–ಆಪರೇಟಿವ್ ಕ್ರೆಡಿಟ್ ಸೊಸೈಟಿಯ ನೂತನ ಕಟ್ಟಡವನ್ನು ಉದ್ಘಾಟಿಸಿ, ಬಳಿಕ ಆಯೋಜಿಸಿದ್ದ ಸಮಾರಂಭದಲ್ಲಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಆರ್ಥಿಕ ಅಭಿವೃದ್ಧಿಯಲ್ಲಿ ಸಹಕಾರ ಸಂಘಗಳು ಮಹತ್ವದ ಪಾತ್ರ ವಹಿಸುತ್ತಿವೆ. ಇಂತಹ ಸಂಸ್ಥೆಗಳ ಮೂಲಕ ಗ್ರಾಮೀಣ ಜನರಿಗೆ ಆರ್ಥಿಕ ಸೇವೆಗಳು ಸುಲಭವಾಗಿ ದೊರೆಯುವುದರೊಂದಿಗೆ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ನೆರವಾಗುತ್ತದೆ. ಸಹಕಾರ ಕ್ಷೇತ್ರದ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಬೇಕು ಎಂದು ತಿಳಿಸಿದರು.

ನಂತರ ಗ್ರಾಮದ ನೂತನ ಅಂಗನವಾಡಿ ಕೇಂದ್ರದ ಕಟ್ಟಡವನ್ನು ಉದ್ಘಾಟಿಸಿದರು. ಮಕ್ಕಳಿಗೆ ಉತ್ತಮ ವಾತಾವರಣದಲ್ಲಿ ಆರೈಕೆ, ಪೌಷ್ಟಿಕ ಆಹಾರ ಹಾಗೂ ಪೂರ್ವಪ್ರಾಥಮಿಕ ಶಿಕ್ಷಣ ದೊರೆಯುವಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದು ಮುಖ್ಯವಾಗಿದೆ. ಮಕ್ಕಳ ಸಮಗ್ರ ಬೆಳವಣಿಗೆಗೆ ಪೂರಕವಾದ ಇಂತಹ ಮೂಲಸೌಕರ್ಯಗಳು ಗ್ರಾಮಗಳ ಪ್ರಗತಿಗೆ ವೇಗ ನೀಡುವುದರ ಜೊತೆಗೆ ಜನರ ಜೀವನಮಟ್ಟ ಸುಧಾರಣೆಗೆ ಸಹಕಾರಿಯಾಗಲಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಹಕಾರಿ ಸಂಘದ ಪದಾಧಿಕಾರಿಗಳು, ಸದಸ್ಯರು, ಗ್ರಾಮದ ಹಿರಿಯರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಕೊಲ್ಲೂರು ಮೂಕಾಂಬಿಕೆ ದೇವಸ್ಥಾನಕ್ಕೆ ಕುಟುಂಬ ಸಮೇತ ಭೇಟಿ ನೀಡಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ



"ಮುಂಜಾನೆಯ ಮೆರಗು"

ಕೊಲ್ಲೂರು ನ, 16– ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕುಟುಂಬ ಸಮೇತರಾಗಿ ಉಡುಪಿ ಜಿಲ್ಲೆಯ ಪ್ರಸಿದ್ಧ ಪುಣ್ಯಕ್ಷೇತ್ರ ಶ್ರೀ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿ, ಜಗನ್ಮಾತೆ ಶ್ರೀ ಮೂಕಾಂಬಿಕೆಯ ದರ್ಶನ ಪಡೆದು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ನಾಡಿನ ಜನತೆಗೆ ಒಳಿತಾಗಲಿ, ರಾಜ್ಯ ಸೇರಿದಂತೆ ದೇಶದ ಎಲ್ಲೆಡೆ ಸುಖ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿ ನೆಲೆಸಲಿ ಎಂದು ದೇವಿಯಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.

ಕುಟುಂಬದೊಂದಿಗೆ ಕ್ಷೇತ್ರಕ್ಕೆ ಆಗಮಿಸಿದ ಸಚಿವರು ದೇವಿಯ ದರ್ಶನ ಪಡೆದು ಧಾರ್ಮಿಕ ವಿಧಿವಿಧಾನಗಳಲ್ಲಿ ಭಾಗವಹಿಸಿದರು.

ಶಿಸ್ತು ಮತ್ತು ತಂಡದ ಮನೋಭಾವ ಬೆಳೆಸಲು ಕ್ರೀಡಾಕೂಟಗಳು ಸಹಕಾರಿ: ಆರ್. ಅಶೋಕ್



"ಮುಂಜಾನೆಯ ಮೆರಗು"

ಬೆಂಗಳೂರು ನ, 16– ಯುವಜನರಲ್ಲಿ ಕ್ರೀಡಾಸಕ್ತಿ, ಶಿಸ್ತು ಹಾಗೂ ತಂಡದ ಮನೋಭಾವ ಬೆಳೆಸುವ ಕ್ರೀಡಾಕೂಟಗಳು ಪ್ರತಿಭಾವಂತ ಕ್ರೀಡಾಪಟುಗಳಿಗೆ ಉತ್ತಮ ವೇದಿಕೆಯಾಗಿವೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅಭಿಪ್ರಾಯಪಟ್ಟರು.

ಕುಮಾರಸ್ವಾಮಿ ಲೇಔಟ್‌ನ ಕೆಂಪೇಗೌಡ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಗೌತಮ್ ರಾಜ್ ಮೆಮೋರಿಯಲ್ ಟ್ರೋಫಿ–2026 ಕ್ರೀಡಾಕೂಟದಲ್ಲಿ ಭಾಗವಹಿಸಿ ಅವರು ಯುವ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ ಯುವ ಆಟಗಾರರೊಂದಿಗೆ ಕೆಲಕಾಲ ಕ್ರಿಕೆಟ್ ಆಡುವ ಮೂಲಕ ಕ್ರೀಡಾಕೂಟದ ಸಂಭ್ರಮದಲ್ಲಿ ಪಾಲ್ಗೊಂಡರು.

ಯುವಜನರು ಶಿಕ್ಷಣದ ಜೊತೆಗೆ ಕ್ರೀಡೆಗಳಲ್ಲಿಯೂ ಆಸಕ್ತಿ ಬೆಳೆಸಿಕೊಳ್ಳಬೇಕು. ಕ್ರೀಡೆ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ಶಿಸ್ತು, ಸಮಯಪ್ರಜ್ಞೆ, ಪರಸ್ಪರ ಸಹಕಾರ ಮತ್ತು ನಾಯಕತ್ವದ ಗುಣಗಳನ್ನು ಬೆಳೆಸುತ್ತದೆ. ಇಂತಹ ಕ್ರೀಡಾಕೂಟಗಳು ಯುವ ಪ್ರತಿಭೆಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಉತ್ತಮ ಅವಕಾಶ ಒದಗಿಸುತ್ತವೆ ಎಂದು ತಿಳಿಸಿದರು.

ಯುವ ಕ್ರೀಡಾಪಟುಗಳು ಕ್ರೀಡಾ ಕ್ಷೇತ್ರದಲ್ಲಿ ಇನ್ನಷ್ಟು ಸಾಧನೆಗಳನ್ನು ಮಾಡಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಳ್ಳುವ ಮೂಲಕ ಉಜ್ವಲ ಭವಿಷ್ಯ ರೂಪಿಸಿಕೊಳ್ಳಲಿ ಎಂದು ಆರ್. ಅಶೋಕ್ ಹಾರೈಸಿದರು.



ರೈತರ ಅನುಕೂಲಕ್ಕಾಗಿ 50 ಲಕ್ಷ ವೆಚ್ಚದಲ್ಲಿ ನೂತನ ಗೋದಾಮು ನಿರ್ಮಾಣ

500 ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮು ಉದ್ಘಾಟಿಸಿದ ಶಾಸಕ ಬಿ.ವೈ. ವಿಜಯೇಂದ್ರ



"ಮುಂಜಾನೆಯ ಮೆರಗು"

ಶಿಕಾರಿಪುರ ನ, 16– ರೈತರ ಕೃಷಿ ಉತ್ಪನ್ನಗಳ ಸಂಗ್ರಹಣೆಗೆ ಅಗತ್ಯವಾದ ಮೂಲಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಶಿಕಾರಿಪುರದಲ್ಲಿ 50 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗಿರುವ 500 ಮೆಟ್ರಿಕ್ ಟನ್ ಸಾಮರ್ಥ್ಯದ ನೂತನ ಗೋದಾಮನ್ನು ಶಾಸಕ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಉದ್ಘಾಟಿಸಿದರು.

ಶಿಕಾರಿಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವತಿಯಿಂದ 2022–23ನೇ ಸಾಲಿನ ಆರ್‌ಐಡಿಎಫ್ 28ನೇ ಯೋಜನೆಯಡಿ ಶಿಕಾರಿಪುರ ಟಿಎಪಿಸಿಎಂಎಸ್ ಆವರಣದಲ್ಲಿ ಈ ಗೋದಾಮು ನಿರ್ಮಿಸಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಬಿ.ವೈ. ವಿಜಯೇಂದ್ರ, ರೈತರ ಕೃಷಿ ಉತ್ಪನ್ನಗಳನ್ನು ಸುರಕ್ಷಿತವಾಗಿ ಸಂಗ್ರಹಿಸಲು ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದು ಅತ್ಯಂತ ಮಹತ್ವದ್ದಾಗಿದೆ. ರೈತರು ಬೆಳೆದ ಉತ್ಪನ್ನಗಳನ್ನು ಸೂಕ್ತ ಸಮಯದಲ್ಲಿ ಮಾರಾಟ ಮಾಡಲು ಹಾಗೂ ಸಂಗ್ರಹಣೆ ಮೂಲಕ ಆರ್ಥಿಕ ನಷ್ಟವನ್ನು ತಡೆಗಟ್ಟಲು ಇಂತಹ ಗೋದಾಮುಗಳು ಸಹಕಾರಿಯಾಗಲಿವೆ. ಕೃಷಿ ಕ್ಷೇತ್ರದ ಅಭಿವೃದ್ಧಿ ಹಾಗೂ ರೈತರ ಆರ್ಥಿಕ ಪ್ರಗತಿಗೆ ಪೂರಕವಾದ ಮೂಲಸೌಕರ್ಯಗಳನ್ನು ಒದಗಿಸುವುದು ನಮ್ಮ ಆದ್ಯತೆಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಟಿಎಪಿಸಿಎಂಎಸ್ ಅಧ್ಯಕ್ಷೆ ಸುನೀತಾ ಯೋಗೇಶಪ್ಪ, ಉಪಾಧ್ಯಕ್ಷ ಸುರೇಶ್ ನಿಂಬಿಗುಂದಿ, ಹಿರಿಯ ಸದಸ್ಯರಾದ ಅಗಡಿ ಅಶೋಕ್, ಬಿ.ಡಿ. ಭೂಂಕಾತ್, ರುದ್ರಮುನಿ ಚರ್ಚಿಗುಂಡಿ, ಡಿಸಿಸಿ ಬ್ಯಾಂಕ್ ನಿರ್ದೇಶಕ ಡಿ.ಎಲ್. ಬಸವರಾಜ್, ಟಿಎಪಿಸಿಎಂಎಸ್ ಸದಸ್ಯ ಶಶಿಧರ್ ಚುರ್ಚಿಗುಂಡಿ ಸೇರಿದಂತೆ ಸಹಕಾರಿ ಕ್ಷೇತ್ರದ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಶಿಕ್ಷಣ ಮತ್ತು ಸಾಧನೆಯ ಮೂಲಕ ಸಮಾನತೆಯ ಸಮಾಜ ನಿರ್ಮಾಣವಾಗಲಿ: ಡಾ. ಯತೀಂದ್ರ ಸಿದ್ದರಾಮಯ್ಯ



"ಮುಂಜಾನೆಯ ಮೆರಗು"

ಮೈಸೂರು ನ, 16– ಶತಮಾನಗಳಿಂದ ಶೋಷಣೆ ಮತ್ತು ನೋವನ್ನು ಅನುಭವಿಸಿರುವ ಸಮುದಾಯದ ಯುವಜನರಲ್ಲಿ ಆತ್ಮವಿಶ್ವಾಸ, ಸ್ವಾಭಿಮಾನ ಹಾಗೂ ಸಾಧನೆಯ ಹಂಬಲವನ್ನು ಮೂಡಿಸುವ ಇಂತಹ ಕಾರ್ಯಕ್ರಮಗಳು ಅತ್ಯಂತ ಮಹತ್ವದ್ದಾಗಿವೆ ಎಂದು ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಮೈಸೂರಿನ ಮಾನಸ ಗಂಗೋತ್ರಿಯ ಸೆನೆಟ್ ಭವನದಲ್ಲಿ ಮೈಸೂರು ವಿಭಾಗದ ಕರ್ನಾಟಕ ರಾಜ್ಯ ಸರ್ಕಾರಿ ಎಸ್‌ಸಿ/ಎಸ್‌ಟಿ ನೌಕರರ ಸಂಘದ ವತಿಯಿಂದ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ಆಯೋಜಿಸಿದ್ದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ದಲಿತ ಚಳವಳಿ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ ಅಂಬೇಡ್ಕರ್ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿದರು.

ದೇಶದಲ್ಲಿ ಜಾತೀಯತೆ ಇನ್ನೂ ಸಂಪೂರ್ಣವಾಗಿ ನಿರ್ಮೂಲನೆಯಾಗಿಲ್ಲ. ಸಂವಿಧಾನಬದ್ಧ ಸಮಾನತೆಯ ಆಶಯ ಸಾಕಾರಗೊಳ್ಳಲು ಇನ್ನೂ ಸಾಕಷ್ಟು ದೂರ ಸಾಗಬೇಕಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಜನರು ಶಿಕ್ಷಣದಲ್ಲಿಲ್ಲಿ ಉನ್ನತ ಸಾಧನೆ ಮಾಡುವುದರ ಜೊತೆಗೆ ಉನ್ನತ ಹುದ್ದೆಗಳನ್ನು ಅಲಂಕರಿಸುವ ಗುರಿ ಹೊಂದಬೇಕು ಎಂದು ಕರೆ ನೀಡಿದರು.

ಬಾಬಾಸಾಹೇಬರು ಪ್ರತಿಪಾದಿಸಿದ 'ಶಿಕ್ಷಣ, ಸಂಘಟನೆ ಮತ್ತು ಹೋರಾಟ' ಎಂಬ ತತ್ವವನ್ನು ಪ್ರತಿಯೊಬ್ಬರೂ ಜೀವನದ ಮಾರ್ಗದರ್ಶಿಯಾಗಿ ಸ್ವೀಕರಿಸಬೇಕು. ತಮ್ಮ ಹಕ್ಕುಗಳಿಗಾಗಿ ಪ್ರಜಾಸತ್ತಾತ್ಮಕವಾಗಿ ಹೋರಾಡುವ ಮನೋಭಾವ ಬೆಳೆಸಿಕೊಳ್ಳಬೇಕು. ಹಿಂದುಳಿದ ಸಮುದಾಯಗಳಲ್ಲಿ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮಾನತೆ ನೆಲೆಸಿದಾಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯ. ವೈಯಕ್ತಿಕವಾಗಿ ಸಾಧನೆ ಮಾಡಿದವರು ತಮ್ಮ ಸಮುದಾಯದ ಏಳಿಗೆಗೂ ಕೊಡುಗೆ ನೀಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯಕ್ಕೆ ಗಣನೀಯ ಸೇವೆ ಸಲ್ಲಿಸಿದ ಗಣ್ಯರು, ದಲಿತ ಚಳವಳಿಯಲ್ಲಿ ತೊಡಗಿಸಿಕೊಂಡಿರುವ ಮಹನೀಯರು ಹಾಗೂ ಶೈಕ್ಷಣಿಕವಾಗಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗೌರವಿಸಿ ಅಭಿನಂದಿಸಲಾಯಿತು. ಇದೇ ಸಂದರ್ಭದಲ್ಲಿ 'ಇವನಾರವ' ಚಲನಚಿತ್ರದ ಪೋಸ್ಟರ್ ಹಾಗೂ ಟೀಸರ್ ಬಿಡುಗಡೆ ಮಾಡಲಾಯಿತು.

ಉರಿಲಿಂಗ ಪೆದ್ದಿ ಮಠದ ಆಯುಷ್ಮಾನ್ ಜ್ಞಾನಪ್ರಕಾಶ ಸ್ವಾಮೀಜಿ, ಜೇತವನ ಬುದ್ಧ ವಿಹಾರದ ಆಯುಷ್ಮಾನ್ ಮನೋರಥಿತ ಬಂತೇಜಿ, ವಿಶ್ವಮೈತ್ರಿ ಬುದ್ಧ ವಿಹಾರದ ಆಯುಷ್ಮಾನ್ ಡಾ. ಕಲ್ಯಾಣಸಿರಿ ಬಂತೇಜಿ, ಹೆಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು, ಕರ್ನಾಟಕ ರಾಜ್ಯ ಸರ್ಕಾರಿ ಎಸ್‌ಸಿ/ಎಸ್‌ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಡಾ. ಡಿ. ಚಂದ್ರಶೇಖರಯ್ಯ, ಮೈಸೂರು ಜಿಲ್ಲಾಧ್ಯಕ್ಷ ಡಾ. ಎಂ.ಡಿ. ಶಿವರಾಮಕೃಷ್ಣ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಉದ್ಯೋಗ ಖಾತ್ರಿ ಕಾಮಗಾರಿ ಸ್ಥಳಕ್ಕೆ ಸಚಿವ ಈಶ್ವರ ಖಂಡ್ರೆ ಭೇಟಿ

ಕೂಲಿ ಕಾರ್ಮಿಕರೊಂದಿಗೆ ಬೆರೆತು ಕೆಲಸದ ಪರಿಸ್ಥಿತಿ, ಕೂಲಿ ಪಾವತಿ ಕುರಿತು ಮಾಹಿತಿ ಸಂಗ್ರಹ



"ಮುಂಜಾನೆಯ ಮೆರಗು"

ಕಲಬುರಗಿ ನ, 16– ಉದ್ಯೋಗ ಖಾತ್ರಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ಪ್ರಗತಿ ಹಾಗೂ ಕಾರ್ಮಿಕರಿಗೆ ದೊರೆಯುತ್ತಿರುವ ಸೌಲಭ್ಯಗಳ ಕುರಿತು ಪರಿಶೀಲಿಸುವ ಉದ್ದೇಶದಿಂದ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ಕಲಬುರಗಿ ಜಿಲ್ಲೆಯ ಕಮಲಾಪುರ ತಾಲ್ಲೂಕಿನ ಹೊಳಕುಂದಾ ಗ್ರಾಮಕ್ಕೆ ಭೇಟಿ ನೀಡಿದರು.

ಗ್ರಾಮದಲ್ಲಿ ವಿಬಿಜಿ ರಾಮ್‌ಜಿ ಉದ್ಯೋಗ ಖಾತ್ರಿ ಯೋಜನೆಯಡಿ ನಡೆಯುತ್ತಿದ್ದ ಕಾಮಗಾರಿ ಸ್ಥಳಕ್ಕೆ ತೆರಳಿದ ಸಚಿವರು, ಕೂಲಿ ಕಾರ್ಮಿಕರೊಂದಿಗೆ ಬೆರೆತು ಅವರ ಕೆಲಸದ ಪರಿಸ್ಥಿತಿಯನ್ನು ಅವಲೋಕಿಸಿದರು. ಅಲ್ಲದೆ, ಕಾರ್ಮಿಕರೊಂದಿಗೆ ಕೆಲಸದಲ್ಲಿ ಭಾಗವಹಿಸಿ, ಕೂಲಿ ಪಾವತಿ, ಕೆಲಸದ ಸ್ವರೂಪ ಹಾಗೂ ಕಾಮಗಾರಿ ಸ್ಥಳದಲ್ಲಿ ಲಭ್ಯವಿರುವ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ನಿರ್ವಹಿಸುವ ಕಾರ್ಮಿಕರಿಗೆ ಯಾವುದೇ ರೀತಿಯ ತೊಂದರೆ–ಯಾಗದಂತೆ ಅಗತ್ಯ ಮೂಲಸೌಲಭ್ಯಗಳನ್ನು ಕಲ್ಪಿಸಬೇಕು. ದುಡಿಯುವ ಕಾರ್ಮಿಕರಿಗೆ ನಿಗದಿತ ಸಮಯದಲ್ಲಿ ಕೂಲಿ ಪಾವತಿಯಾಗುವಂತೆ ಕ್ರಮ ವಹಿಸಬೇಕು. ಯೋಜನೆಯ ಪ್ರಯೋಜನ ಪ್ರತಿಯೊಬ್ಬ ಅರ್ಹ ಕಾರ್ಮಿಕನಿಗೂ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಗ್ರಾಮೀಣ ಪ್ರದೇಶದ ಕೂಲಿ ಕಾರ್ಮಿಕರಿಗೆ ಉದ್ಯೋಗಾವಕಾಶ ಕಲ್ಪಿಸುವ ಇಂತಹ ಯೋಜನೆಗಳ ಅನುಷ್ಠಾನದಲ್ಲಿ ಅಧಿಕಾರಿಗಳು ವಿಶೇಷ ಗಮನಹರಿಸಬೇಕು ಎಂದು ಸಚಿವರು ತಿಳಿಸಿದರು.

ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಮತ್ತು ವಸತಿ ಸೌಲಭ್ಯ ಕಲ್ಪಿಸುವುದು ಆದ್ಯತೆ: ಸಚಿವ ಸತೀಶ್ ಜಾರಕಿಹೊಳಿ



"ಮುಂಜಾನೆಯ ಮೆರಗು"

ಬೆಳಗಾವಿ ನ, 16– ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉತ್ತಮ ವಸತಿ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಬುಡ್ಯಾನೂರ ಗ್ರಾಮದಲ್ಲಿ 18 ಕೋಟಿ ವೆಚ್ಚದಲ್ಲಿ ನೂತನ ಮೊರಾರ್ಜಿ ದೇಸಾಯಿ ವಸತಿ ಶಾಲೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಯಿತು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕೈಗೆತ್ತಿಕೊಳ್ಳಲಾಗಿರುವ ಈ ಕಟ್ಟಡ ಕಾಮಗಾರಿಗೆ ಸಚಿವ ಸತೀಶ್ ಜಾರಕಿಹೊಳಿ ಅವರು ಶಂಕುಸ್ಥ

ಕ್ಷೇತ್ರದ ಸಮೃದ್ಧಿ, ಜನರ ಸುಖ–ಶಾಂತಿಗಾಗಿ ಉಚ್ಚೆಂಗಮ್ಮ ದೇವಿಗೆ ಶಾಸಕ ಬಿ. ದೇವೇಂದ್ರಪ್ಪ ವಿಶೇಷ ಪೂಜೆ

"ಮುಂಜಾನೆಯ ಮೆರಗು"

ಜಗಳೂರು ನ, 16– ಹರಪ್ಪನಹಳ್ಳಿ ತಾಲ್ಲೂಕಿನ ಐತಿಹಾಸಿಕ ಹಾಗೂ ಧಾರ್ಮಿಕ ಪ್ರಸಿದ್ಧಿಯುಳ್ಳ ಉಚ್ಚಂಗಿದುರ್ಗ ಗ್ರಾಮದ ಶಕ್ತಿ ದೇವತೆಯಾದ ಶ್ರೀ ಉಚ್ಚೆಂಗಮ್ಮ ದೇವಿ ದೇವಸ್ಥಾನಕ್ಕೆ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಅವರು ಭೇಟಿ ನೀಡಿ, ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿ, ಜನರ ಸುಖ–ಶಾಂತಿ, ಸಮೃದ್ಧಿ ಹಾಗೂ ಸರ್ವರ ಕಲ್ಯಾಣಕ್ಕಾಗಿ ದೇವಿಯಲ್ಲಿ ಪ್ರಾರ್ಥನೆ ಸಲ್ಲಿಸಿದರು. ಕ್ಷೇತ್ರದ ಜನರು ಎದುರಿಸುತ್ತಿರುವ ಸಮಸ್ಯೆಗಳು ದೂರವಾಗಿ, ರೈತಾಪಿ ವರ್ಗಕ್ಕೆ ಉತ್ತಮ ಮಳೆ–ಬೆಳೆ ದೊರೆಯಲಿ, ಕೃಷಿ ಚಟುವಟಿಕೆಗಳು ಸಮೃದ್ಧಿಯಾಗಲಿ, ವ್ಯಾಪಾರ–ವಹಿವಾಟು ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ಪ್ರಗತಿ ಕಂಡುಬರಲಿ ಎಂದು ಭಕ್ತಿಯಿಂದ ಪೂಜೆ ಸಲ್ಲಿಸಿದರು.

ನಾಡಿನ ಪರಂಪರೆಯಲ್ಲಿ ಶಕ್ತಿ ದೇವತೆಗಳ ಆರಾಧನೆಗೆ ವಿಶೇಷ ಮಹತ್ವವಿದೆ. ಅದರಲ್ಲೂ ಉಚ್ಚಂಗಿದುರ್ಗದ ಶ್ರೀ ಉಚ್ಚೆಂಗಮ್ಮ ದೇವಿಯು ಈ ಭಾಗದ ಸಾವಿರಾರು ಭಕ್ತರ ಆರಾಧ್ಯ ದೈವವಾಗಿದ್ದು, ಭಕ್ತರು ದೂರದ ಊರುಗಳಿಂದಲೂ ಆಗಮಿಸಿ ದೇವಿಯ ದರ್ಶನ ಪಡೆದು ತಮ್ಮ ಸಂಕಷ್ಟಗಳ ನಿವಾರಣೆ ಹಾಗೂ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸುತ್ತಾರೆ. ಧಾರ್ಮಿಕ ನಂಬಿಕೆ ಮತ್ತು ಭಕ್ತಿಯ ಕೇಂದ್ರವಾಗಿರುವ ಈ ಕ್ಷೇತ್ರವು ತನ್ನದೇ ಆದ ಐತಿಹಾಸಿಕ ಹಾಗೂ ಆಧ್ಯಾತ್ಮಿಕ ಮಹತ್ವವನ್ನು ಹೊಂದಿದೆ.

ಶಾಸಕ ಬಿ. ದೇವೇಂದ್ರಪ್ಪ ಅವರು ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿರುವುದು ಧಾರ್ಮಿಕ ಕ್ಷೇತ್ರಗಳ ಮೇಲಿನ ಗೌರವ ಹಾಗೂ ನಂಬಿಕೆಯನ್ನು ಪ್ರತಿಬಿಂಬಿಸುವಂತಿದೆ. ಸಾರ್ವಜನಿಕ ಜೀವನದಲ್ಲಿ ಜನರ ಸೇವೆ ಮಾಡುವುದರ ಜತೆಗೆ ನಾಡಿನ ಸಂಸ್ಕೃತಿ, ಸಂಪ್ರದಾಯ ಮತ್ತು ಧಾರ್ಮಿಕ ಪರಂಪರೆಯನ್ನು ಗೌರವಿಸುವುದು ಮಹತ್ವದ್ದಾಗಿದೆ ಎಂಬ ಆಶಯ ಈ ಭೇಟಿಯಲ್ಲಿ ವ್ಯಕ್ತವಾಯಿತು.



ದೇವಿಯ ಸನ್ನಿಧಿಯಲ್ಲಿ ಕೆಲಕಾಲ ಭಕ್ತಿಭಾವದಿಂದ ಪೂಜಾ ಕಾರ್ಯಗಳಲ್ಲಿ ಪಾಲ್ಗೊಂಡ ಶಾಸಕರು, ಕ್ಷೇತ್ರದ ಜನರ ಆಶೋತ್ತರಗಳು ಈಡೇರಲಿ, ಜಗಳೂರು ವಿಧಾನಸಭಾ ಕ್ಷೇತ್ರವು ಅಭಿವೃದ್ಧಿ, ಶಿಕ್ಷಣ, ಕೃಷಿ, ಆರೋಗ್ಯ ಹಾಗೂ ಮೂಲಸೌಕರ್ಯ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಪ್ರಗತಿ ಸಾಧಿಸಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು, ಸ್ಥಳೀಯ ನಾಯಕರು ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದು, ದೇವಿಯ ದರ್ಶನ ಪಡೆದು ಪೂಜಾ ಕಾರ್ಯದಲ್ಲಿ ಭಾಗವಹಿಸಿದರು.

ತುತ್ತಿನ ಚೀಲಬತುಂಬಿಸಿ ಕೊಳ್ಳುವುದಕ್ಕಾಗಿ ರಾತ್ರಿ ಬೀದಿಬದಿಯಲ್ಲಿ ನಾಟಕ ಪ್ರದರ್ಶನ; ಅಲೆಮಾರಿ ಕಲಾವಿದರ ಬದುಕಿನ ಬವಣೆ



"ಮುಂಜಾನೆಯ ಮೆರಗು"

ಜಗಳೂರು ನ, 16– ಹೊಟ್ಟೆಪಾಡಿಗಾಗಿ ಊರೂರು ಅಲೆದು, ತಮಗೆ ಕರಗತವಾಗಿರುವ ಸಾಂಪ್ರದಾಯಿಕ ಕಲೆಗಳನ್ನು ಪ್ರದರ್ಶಿಸುವ ಮೂಲಕ ಸಾರ್ವಜನಿಕರಿಂದ ಸಿಗುವ ಅಲ್ಪ ಹಣದಲ್ಲಿಯೇ ಜೀವನ ಸಾಗಿಸುತ್ತಿರುವ ಅಲೆಮಾರಿ ಕಲಾವಿದರ ಬದುಕು ಇಂದಿಗೂ ಸಂಕಷ್ಟದಲ್ಲಿದೆ.

ಅಲೆಮಾರಿ ಸಮುದಾಯಕ್ಕೆ ಸೇರಿದ ಈ ಕಲಾವಿದರು ಬದುಕಿನ ಬಂಡಿ ಸಾಗಿಸಲು ತಮ್ಮ ಕಲೆಗಳನ್ನೇ ಆಧಾರವಾಗಿಸಿಕೊಂಡಿದ್ದಾರೆ. ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಂಜೆಯಾಗುತ್ತಿದ್ದಂತೆ ಬೀದಿಬದಿಗಳಲ್ಲಿ ನಾಟಕ, ವಿವಿಧ ವೇಷಭೂಷಣ ಹಾಗೂ ಸಾಂಪ್ರದಾಯಿಕ ಕಲಾಪ್ರದರ್ಶನಗಳನ್ನು ನಡೆಸಿ ಸಾರ್ವಜನಿಕರ ಗಮನ ಸೆಳೆಯುತ್ತಾರೆ. ಪ್ರದರ್ಶನ ವೀಕ್ಷಿಸಿದ ಜನರು ನೀಡುವ ಒಂದು ರೂಪಾಯಿ, ಐದು ರೂಪಾಯಿ ಸೇರಿದಂತೆ ಅಲ್ಪ ಮೊತ್ತದ ಹಣವನ್ನು ಸಂಗ್ರಹಿಸಿಕೊಂಡು ಅದರಿಂದಲೇ ತಮ್ಮ ದಿನನಿತ್ಯದ ಊಟೋಪಚಾರ ಹಾಗೂ ಜೀವನ ನಿರ್ವಹಣೆ ಮಾಡುತ್ತಿದ್ದಾರೆ.

ಹಿಂದೆ ಈ ಕಲಾವಿದರು ಸಂಜೆ ವೇಳೆ ಗ್ರಾಮಗಳ ಬೀದಿಗಳಲ್ಲಿ ಹಾಗೂ ಪಟ್ಟಣದ ಪ್ರಮುಖ ವೃತ್ತಗಳಲ್ಲಿ ತಮ್ಮ ಕಲಾ ಪ್ರದರ್ಶನ ನೀಡುತ್ತಿದ್ದರು. ಜನರು ನೀಡುವ ಹಣವನ್ನು ಸಂಗ್ರಹಿಸಿಕೊಂಡು ಒಂದು ಪ್ರದೇಶದಿಂದ ಮತ್ತೊಂದು ಪ್ರದೇಶಕ್ಕೆ ತೆರಳಿ ಮತ್ತೆ ತಮ್ಮ ಕಲೆಯನ್ನು ಪ್ರದರ್ಶಿಸುವ ಮೂಲಕ ಜೀವನ ಸಾಗಿಸುತ್ತಿದ್ದರು. ಆದರೆ, ಬದಲಾದ ಕಾಲಘಟ್ಟದಲ್ಲಿ ಸಾಂಪ್ರದಾಯಿಕ ಕಲೆಗಳಿಗೆ ಪ್ರೋತ್ಸಾಹ ಕಡಿಮೆಯಾಗುತ್ತಿರುವುದರಿಂದ ಇಂತಹ ಕಲಾವಿದರು ಜೀವನ ನಿರ್ವಹಣೆಗಾಗಿ ಇನ್ನಷ್ಟು ಕಷ್ಟಪಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಜಗಳೂರು ಪಟ್ಟಣದಲ್ಲಿ ಕಳೆದ ಕೆಲವು ದಿನಗಳಿಂದ ಅಲೆಮಾರಿ ಸಮುದಾಯದ ಕಲಾವಿದರು ರಾತ್ರಿ ವೇಳೆಯೂ ಬೀದಿಬದಿಯಲ್ಲಿ ತಮ್ಮ ಕಲಾ ಪ್ರದರ್ಶನಗಳನ್ನು ನಡೆಸುತ್ತಿದ್ದಾರೆ. ಹಗಲು–ರಾತ್ರಿ ಎನ್ನದೆ ಹೊಟ್ಟೆಪಾಡಿಗಾಗಿ ಶ್ರಮಿಸುತ್ತಿರುವ ಇವರ ಸ್ಥಿತಿ ಸಾರ್ವಜನಿಕರಲ್ಲಿ ಅನುಕಂಪ ಮೂಡಿಸುತ್ತಿದೆ. ತಲೆಮಾರುಗಳಿಂದ ಬಂದಿರುವ ಕಲೆಯನ್ನು ಉಳಿಸಿಕೊಂಡು ಹೋಗುವುದರ ಜೊತೆಗೆ ಅದನ್ನೇ ಜೀವನಾಧಾರವನ್ನಾಗಿ ಮಾಡಿಕೊಂಡಿರುವ ಈ ಕಲಾವಿದರಿಗೆ ಸೂಕ್ತ ಪ್ರೋತ್ಸಾಹದ ಅಗತ್ಯವಿದೆ.

ಸರ್ಕಾರ ಗಮನಹರಿಸಲಿ:

ಅಲೆಮಾರಿ ಸಮುದಾಯದ ಅನೇಕ ಕುಟುಂಬಗಳು ಇಂದಿಗೂ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿವೆ. ಇಂತಹ ಸಮುದಾಯಗಳನ್ನು ಸರ್ಕಾರ ಗುರುತಿಸಿ ಅವರಿಗೆ ವಸತಿ, ಶಿಕ್ಷಣ, ಆರೋಗ್ಯ, ಉದ್ಯೋಗ ಹಾಗೂ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸಬೇಕು. ಸಾಂಪ್ರದಾಯಿಕ ಕಲೆಗಳನ್ನು ಉಳಿಸಿ ಬೆಳೆಸಲು ಕಲಾವಿದರಿಗೆ ಮಾಸಾಶನ, ಆರ್ಥಿಕ ನೆರವು ಹಾಗೂ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಅವರ ಬದುಕಿಗೆ ಆಸರೆಯಾಗಬೇಕು ಎಂದು ಸಾಮಾಜಿಕ ಹೋರಾಟಗಾರ ರಾಘವೇಂದ್ರ ಒತ್ತಾಯಿಸಿದ್ದಾರೆ.

ಧೋನಿ ಸ್ಮಾರಕ ಭವನಕ್ಕೆ ಎಂ.ಡಿ. ಕೀರ್ತಿಕುಮಾರ್ ಭೇಟಿ

"ಮುಂಜಾನೆಯ ಮೆರಗು"

ಜಗಳೂರು ನ, 16– ಜಾರ್ಖಂಡ್ ರಾಜ್ಯದ ರಾಜಧಾನಿ ರಾಂಚಿಯಲ್ಲಿರುವ ಭಾರತ ಕ್ರಿಕೆಟ್ ತಂಡದ ದಿಗ್ಗಜ ಆಟಗಾರ, ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಅವರ ಸ್ಮಾರಕ ಭವನಕ್ಕೆ ಕೆಪಿಸಿಸಿ ಎಸ್‌ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಅವರು ಭೇಟಿ ನೀಡಿ, ಧೋನಿ ಅವರ ಕ್ರಿಕೆಟ್ ಸಾಧನೆಗಳು ಹಾಗೂ ಜೀವನದ ಸ್ಮರಣೀಯ ಕ್ಷಣಗಳನ್ನು ಮೆಲುಕು ಹಾಕಿದರು.

ಕ್ರಿಕೆಟ್ ಜಗತ್ತಿನಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿರುವ ಮಹೇಂದ್ರ ಸಿಂಗ್ ಧೋನಿ ಅವರು, ತಮ್ಮ ನಾಯಕತ್ವದ ಮೂಲಕ ಭಾರತಕ್ಕೆ ಅನೇಕ ಐತಿಹಾಸಿಕ ಗೆಲುವುಗಳನ್ನು ತಂದುಕೊಟ್ಟಿದ್ದಾರೆ. ಅವರ ಸಾಧನೆಗಳು, ಸರಳ ವ್ಯಕ್ತಿತ್ವ, ನಾಯಕತ್ವದ ಗುಣ ಹಾಗೂ ದೇಶದ ಕ್ರಿಕೆಟ್ ಇತಿಹಾಸಕ್ಕೆ ನೀಡಿದ ಕೊಡುಗೆಗಳು ಇಂದಿಗೂ ಕೋಟ್ಯಂತರ ಅಭಿಮಾನಿಗಳಿಗೆ ಸ್ಫೂರ್ತಿಯಾಗಿವೆ.

ಧೋನಿ ಅವರ ಹಳೆಯ ಮನೆಯನ್ನು ಅವರ ಜೀವನ ಮತ್ತು ಕ್ರಿಕೆಟ್ ಪಯಣದ ಸ್ಮರಣಾರ್ಥ ಸ್ಮಾರಕ ಭವನವಾಗಿ ರೂಪಿಸಲಾಗಿದೆ. ಇಲ್ಲಿ ಅವರು ಬಾಲ್ಯದಿಂದ ಕ್ರಿಕೆಟ್ ಕ್ಷೇತ್ರದಲ್ಲಿ ಬೆಳೆದು ಬಂದ ಹಾದಿ, ಸಾಧನೆಯ ಪ್ರಮುಖ ಘಟ್ಟಗಳು, ಐತಿಹಾಸಿಕ ಪಂದ್ಯಗಳ ನೆನಪುಗಳು ಹಾಗೂ ವೈಯಕ್ತಿಕ ಜೀವನಕ್ಕೆ ಸಂಬಂಧಿಸಿದ ಹಲವು ಅಪರೂಪದ



ಛಾಯಾಚಿತ್ರಗಳನ್ನು ಪ್ರದರ್ಶನಕ್ಕೆ ಇಡಲಾಗಿದೆ.

ಅಲ್ಲದೆ, ಧೋನಿ ಅವರು ತಮ್ಮ ಜೀವನದಲ್ಲಿ ಬಳಸಿದ್ದ ವಿವಿಧ ವಸ್ತುಗಳು, ಕ್ರಿಕೆಟ್ ಪರಿಕರಗಳು ಹಾಗೂ ಅವರ ಸಾಧನೆಗಳನ್ನು ನೆನಪಿಸುವ ಸ್ಮರಣಿಕೆಗಳು ಪ್ರವಾಸಿಗರು ಮತ್ತು ಕ್ರಿಕೆಟ್ ಅಭಿಮಾನಿಗಳ ಗಮನ ಸೆಳೆಯುತ್ತಿವೆ.

ಸ್ಮಾರಕ ಭವನಕ್ಕೆ ಭೇಟಿ ನೀಡಿದ ಎಂ.ಡಿ. ಕೀರ್ತಿಕುಮಾರ್ ಅವರು, ಭಾರತೀಯ ಕ್ರಿಕೆಟ್‌ಗೆ ಅಪಾರ ಕೊಡುಗೆ ನೀಡಿರುವ ಧೋನಿ ಅವರ ಸಾಧನೆಗಳನ್ನು ಸ್ಮರಿಸಿ, ಅವರ ಜೀವನ ಪಯಣ ಯುವಜನತೆಗೆ ಪರಿಶ್ರಮ, ಶಿಸ್ತು, ಆತ್ಮವಿಶ್ವಾಸ ಮತ್ತು ಸಾಧನೆಯ ಛಲಕ್ಕೆ ಉತ್ತಮ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ವಿದ್ಯಾರ್ಥಿಗಳು ಗುರಿ ಸಾಧಿಸಿ: ಗಡಿಮಾಕುಂಟೆ ಸಿದ್ದೇಶ್



"ಮುಂಜಾನೆಯ ಮೆರಗು"

ಜಗಳೂರು ನ, 16– ಮಕ್ಕಳ ಕಲಿಕೆ ಹಾಗೂ ಶೈಕ್ಷಣಿಕ ಪ್ರಗತಿಗಾಗಿ ಸರ್ಕಾರವು ಹಲವಾರು ರೀತಿಯ ಸೌಲಭ್ಯಗಳು ಮತ್ತು ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ಅವುಗಳನ್ನು ಸಮರ್ಪಕವಾಗಿ ಸದುಪಯೋಗಪಡಿಸಿಕೊಂಡು ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆ, ಸಾಮರ್ಥ್ಯ ಹಾಗೂ ಕೌಶಲಗಳನ್ನು ಬೆಳೆಸಿಕೊಳ್ಳುವ ಮೂಲಕ ಜೀವನದಲ್ಲಿ ಉನ್ನತ ಗುರಿ ಸಾಧಿಸಬೇಕು ಎಂದು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಗಡಿಮಾಕುಂಟೆ ಸಿದ್ದೇಶ್ ಹೇಳಿದರು.

ತಾಲೂಕಿನ ಯರ್ಲಕಟ್ಟೆ ಗ್ರಾಮದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸೊ–ಕ್ಕೆ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಪಠ್ಯಪುಸ್ತಕದ ಜ್ಞಾನದ ಜೊತೆಗೆ ಕಲೆ, ಸಾಹಿತ್ಯ, ಸಂಗೀತ, ನೃತ್ಯ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಬಗ್ಗೆ ಆಸಕ್ತಿ ಬೆಳೆಸುವುದು ಅಗತ್ಯ. ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಹೊರತರುವ ಉತ್ತಮ ವೇದಿಕೆಯಾಗಿವೆ. ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಸ್ಪರ್ಧಾತ್ಮಕ ಮನೋಭಾವ ಹಾಗೂ ವೇದಿಕೆಯ ಮೇಲೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವ ಧೈರ್ಯ ಬೆಳೆಯುತ್ತದೆ. ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸಿ ನಿರಂತರ ಪ್ರಯತ್ನದ ಮೂಲಕ ಯಶಸ್ಸು ಗಳಿಸಬೇಕು ಎಂದು ಸಲಹೆ ನೀಡಿದರು.

ಶಾಲೆಯ ಮುಖ್ಯೋಪಾಧ್ಯಾಯ ಚಂದ್ರಪ್ಪ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯೂ ಒಂದಲ್ಲ ಒಂದು ವಿಶೇಷ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಶಿಕ್ಷಕರು ಹಾಗೂ ಪೋಷಕರ ಮೇಲಿದೆ. ಪ್ರತಿಭಾ ಕಾರಂಜಿ ಮಕ್ಕಳ ಸೃಜನಶೀಲತೆ ಮತ್ತು ವ್ಯಕ್ತಿತ್ವ ವಿಕಸನಕ್ಕೆ ಪೂರಕವಾದ ವೇದಿಕೆಯಾಗಿದ್ದು, ವಿದ್ಯಾರ್ಥಿಗಳು ಇಂತಹ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಕ್ಲಸ್ಟರ್ ವ್ಯಾಪ್ತಿಯ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿ ಗಾಯನ, ನೃತ್ಯ, ಭಾಷಣ ಸೇರಿದಂತೆ ವಿವಿಧ ಸಾಂಸ್ಕೃತಿಕ ಹಾಗೂ ಸೃಜನಾತ್ಮಕ ಸ್ಪರ್ಧೆಗಳಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿವಿಧ ಶಾಲೆಗಳ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲೂ ತೊಡಗಿಸಿಕೊಳ್ಳಬೇಕು: ಬಿಇಒ ಹಾಲಮೂರ್ತಿ

ಪ್ರತಿಭಾ ಕಾರಂಜಿ ಮಕ್ಕಳ ಸುಪ್ತ ಪ್ರತಿಭೆ ಅನಾವರಣಕ್ಕೆ ಉತ್ತಮ ವೇದಿಕೆ

"ಮುಂಜಾನೆಯ ಮೆರಗು"

ಜಗಳೂರು, ನ.16– ವಿದ್ಯಾರ್ಥಿಗಳು ಕೇವಲ ಪಠ್ಯಪುಸ್ತಕದ ಅಧ್ಯಯನಕ್ಕೆ ಸೀಮಿತವಾಗದೆ, ಶೈಕ್ಷಣಿಕ ಸಾಧನೆಯ ಜೊತೆಗೆ ಕಲೆ, ಸಾಹಿತ್ಯ, ಸಂಗೀತ, ನೃತ್ಯ ಸೇರಿದಂತೆ ವಿವಿಧ ಪಠ್ಯೇತರ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಗುಣ ಬೆಳೆಸಿಕೊಳ್ಳಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಹಾಲಮೂರ್ತಿ ಹೇಳಿದರು.

ತಾಲೂಕಿನ ಹಿರೇಮಲ್ಲನಹೊಳೆ ಗ್ರಾಮದ ಎಸ್.ಕೆ.ಒ.ಟಿ. ಶಾಲಾ ಆವರಣದಲ್ಲಿ ಸೋಮವಾರ ಆಯೋಜಿಸಿದ್ದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನವು ಪ್ರತಿಯೊಬ್ಬರ ಬದುಕಿನಲ್ಲಿ ಅತ್ಯಂತ ಮಹತ್ವದ ಘಟ್ಟವಾಗಿದೆ. ಈ ಹಂತದಲ್ಲಿ ಮಕ್ಕಳು ಶಿಕ್ಷಣದ ಮೂಲಕ ಜ್ಞಾನ ಸಂಪಾದಿಸುವುದರ ಜೊತೆಗೆ ತಮ್ಮಲ್ಲಿರುವ ಆಸಕ್ತಿ, ಅಭಿರುಚಿ ಹಾಗೂ ಕೌಶಲ್ಯಗಳನ್ನು ಗುರುತಿಸಿಕೊಂಡು ಅವುಗಳನ್ನು ಬೆಳೆಸಿಕೊಳ್ಳಬೇಕು. ಪಠ್ಯೇತರ ಚಟುವಟಿಕೆಗಳು ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗಿದ್ದು, ಅವರಲ್ಲಿನ ಆತ್ಮವಿಶ್ವಾಸ, ಸೃಜನಶೀಲತೆ, ನಾಯಕತ್ವ ಗುಣ, ಸಂವಹನ ಕೌಶಲ್ಯ ಹಾಗೂ ಸ್ಪರ್ಧಾತ್ಮಕ ಮನೋಭಾವವನ್ನು ವೃದ್ಧಿಸುತ್ತವೆ ಎಂದರು.



ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಅಂಕಗಳಿಕೆಯೊಂದೇ ವಿದ್ಯಾರ್ಥಿಗಳ ಪ್ರತಿಭೆಗೆ ಮಾನದಂಡವಾಗಬಾರದು. ಪಠ್ಯಕ್ರಮದ ಜ್ಞಾನದೊಂದಿಗೆ ಜೀವನ ಕೌಶಲ್ಯ, ಸೃಜನಶೀಲ ಚಿಂತನೆ ಮತ್ತು ಸಾಮಾಜಿಕ ಪ್ರಜ್ಞೆಯನ್ನು ಬೆಳೆಸಿಕೊಳ್ಳುವುದು ಅತ್ಯಗತ್ಯ. ಕಲೆ, ಸಾಹಿತ್ಯ, ಸಂಗೀತ, ನೃತ್ಯ, ಚಿತ್ರಕಲೆ, ಭಾಷಣ, ಅಭಿನಯ ಹಾಗೂ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ಅಡಗಿರುವ ವಿಭಿನ್ನ ಪ್ರತಿಭೆಗಳು ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮಕ್ಕಳ ಪ್ರತಿಭೆ ಅರಳುವಲ್ಲಿ ಪೋಷಕರು ಹಾಗೂ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಪ್ರತಿಯೊಂದು ಮಗುವಿನಲ್ಲಿಯೂ ಒಂದಲ್ಲ ಒಂದು ವಿಶೇಷ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಸೂಕ್ತ ಮಾರ್ಗದರ್ಶನ ನೀಡುವುದು ಶಿಕ್ಷಕರ ಜವಾಬ್ದಾರಿಯಾಗಿದೆ. ಅದೇ ರೀತಿ ಪೋಷಕರು ಮಕ್ಕಳನ್ನು ಇತರ ಮಕ್ಕಳೊಂದಿಗೆ ಹೋಲಿಕೆ ಮಾಡದೆ, ಅವರ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ಪ್ರೋತ್ಸಾಹಿಸಬೇಕು. ಮಕ್ಕಳ ಸೋಲುಗಳನ್ನು ಟೀಕಿಸುವ ಬದಲು ತಪ್ಪುಗಳನ್ನು ತಿದ್ದಿಕೊಂಡು ಮುನ್ನಡೆಯಲು ಆತ್ಮಸ್ಥೈರ್ಯ ತುಂಬಬೇಕು ಎಂದರು.

ಪ್ರತಿಭಾ ಕಾರಂಜಿ ಕಾರ್ಯಕ್ರಮಗಳು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗಿವೆ. ಗ್ರಾಮೀಣ ಪ್ರದೇಶದ ಅನೇಕ ಮಕ್ಕಳಲ್ಲಿ ಅಪಾರವಾದ ಸಾಂಸ್ಕೃತಿಕ ಹಾಗೂ ಕಲಾತ್ಮಕ ಪ್ರತಿಭೆಗಳಿವೆ. ಇಂತಹ ಪ್ರತಿಭೆಗಳಿಗೆ ಸೂಕ್ತ ಅವಕಾಶ ಮತ್ತು ಪ್ರೋತ್ಸಾಹ ದೊರೆತಾಗ ರಾಜ್ಯ, ರಾಷ್ಟ್ರಮಟ್ಟದಲ್ಲಿಯೂ ಸಾಧನೆ ಮಾಡಲು ಸಾಧ್ಯ. ಸ್ಪರ್ಧೆಗಳಲ್ಲಿ ಸೋಲು–ಗೆಲುವು ಸಹಜವಾಗಿದ್ದು, ಭಾಗವಹಿಸುವ ಉತ್ಸಾಹ ಮತ್ತು ಹೊಸತನ್ನು ಕಲಿಯುವ ಮನೋಭಾವವೇ ಮುಖ್ಯವಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಪ್ರತಿಭಾ ಕಾರಂಜಿಯು ಮಕ್ಕಳಲ್ಲಿ ಅಡಗಿರುವ ಸು